ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು –೧೨೩

**ಪಟ್ಟಿ – ೩೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ : ೨೭ನೇ ನವೆಂಬರ್, ೨೦೧೫.**

---

## ಸಮೂಹ – V

೧. ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ವಸತಿ ಸಚಿವರು.

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು.

೭. ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು.

---

# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಮಂಜೂರಾದ ಮತ್ತು ಖಾಲಿಯಿರುವ ಹುದ್ದೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧೦ (೩೩೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಮಂಜೂರಾಗಿರುವ ಸಹಾಯಕ ನಿರ್ದೇಶಕರು, ಸಹಾಯಕ ಯೋಜನಾಧಿಕಾರಿ, ಕಾರ್ಯನಿರ್ವಾಹಕ ಅಧಿಕಾರಿ, ಸಹಾಯಕ ಕಾರ್ಯದರ್ಶಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ–ಗ್ರೇಡ್–I, ಕಾರ್ಯದರ್ಶಿ–II , ಸಹಾಯಕ ದ್ವೀತಿಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಮೇಲಿನ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ, ಖಾಲಿ ಇರುವ ಹಾಗೂ ಅನ್ಯ ಇಲಾಖೆಯ ನಿಯೋಜನೆ ಮೇಲೆ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; (ಹುದ್ದೆವಾರು–ಜಿಲ್ಲಾವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಇಲಾಖೆಯಲ್ಲಿ ಆಡಳಿತ ವ್ಯವಸ್ಥೆ ಕುಸಿದಿರುವುದು ನಿಜವೇ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಗ್ರೇಡ್–II ಕಾರ್ಯದರ್ಶಿಗಳಿಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧ (೩೩೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೦ರ ನಂತರ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇರ ನೇಮಕಾತಿ ಮೂಲಕ ಆಯ್ಕೆಯಾದ ಗ್ರೇ–II ಕಾರ್ಯದರ್ಶಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಆಯ್ಕೆಯಾದ ನೌಕರರಿಗೆ ಯಾವ ಯಾವ ಜಿಲ್ಲೆಗಳಲ್ಲಿ ಪದೋನ್ನತಿ ನೀಡಲಾಗಿದೆ; (ಜಿಲ್ಲಾವಾರು–ಸಂಖ್ಯೆ ವಿವರ ನೀಡುವುದು)

(ಇ) ಪದೋನ್ನತಿ ನೀಡದೆ ಇದ್ದಲ್ಲಿ ಈ ಬಗ್ಗೆ ಇರುವ ತೊಡಕುಗಳೇನು; (ವಿವರ ನೀಡುವುದು)

(ಈ) ಕೆಲವು ಜಿಲ್ಲೆಗಳಲ್ಲಿ ಪದೋನ್ನತಿ ನೀಡಿ ಉಳಿದ ಜಿಲ್ಲೆಗಳಲ್ಲಿ ಪದೋನ್ನತಿ ನೀಡದೇ ಇರುವುದು ತಾರತಮ್ಯ ಎಸಗಿದಂತೆ ಆಗುವುದಿಲ್ಲವೇ; ಈ ಬಗ್ಗೆ ಸರಿಪಡಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ೧೪ನೇ ಹಣಕಾಸು ಯೋಜನೆಯ ಅನುದಾನ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೨ (೩೩೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೪ನೇ ಹಣಕಾಸು ಯೋಜನೆಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ನಿಗಧಿಪಡಿಸಿದ ಮತ್ತು ಬಿಡುಗಡೆಯಾದ ಅನುದಾನ ಎಷ್ಟು;

(ಆ) ರಾಜ್ಯದಿಂದ ಜಿಲ್ಲಾ ಪಂಚಾಯತ್ ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಿಗೆ ಹಂಚಿಕೆ ಮಾಡಿರುವ ಅನುದಾನ ಎಷ್ಟು; (ಹಂಚಿಕೆಯ ವಿವರ ನೀಡುವುದು)

(ಇ) ಪ್ರತಿ ಗ್ರಾಮ ಪಂಚಾಯತ್‌ಗಳಿಗೆ ಯಾವ ಆಧಾರದ ಮೇಲೆ ಅನುದಾನವನ್ನು ನಿಗಧಿಪಡಿಸಲಾಗಿದೆ;

(ಈ) ಕೇಂದ್ರ ಸರ್ಕಾರದ ೧೪ನೇ ಹಣಕಾಸು ಯೋಜನೆಯ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯತ್ ಖಾತೆಗಳಿಗೆ ಜಮೆ ಮಾಡುವ ವಿಧಾನ ಸಮರ್ಪಕವೇ;

(ಉ) ಕೇಂದ್ರ ಸರ್ಕಾರ ನಿರ್ದಿಷ್ಟ ಉದ್ದೇಶಗಳಿಗೆ ನೀಡುವ ಅನುದಾನವನ್ನು ವಿದ್ಯುತ್ ಬಿಲ್ಲು ಪಾವತಿಗೆ ವಿನಿಯೋಗಿಸುತ್ತಿರುವುದು ಸರಿಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಗ್ರಾಮ ಪಂಚಾಯತ್‌ಗಳಿಗೆ ವಿತರಿಸುವ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್ ಖರೀದಿಯಲ್ಲಿನ ಅವ್ಯವಹಾರದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೩ (೩೩೩೪+೩೬೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಸ್ವರಾಜ್ ಯೋಜನೆಯಡಿ ಗ್ರಾಮ ಪಂಚಾಯತ್‌ಗಳಿಗೆ ವಿತರಿಸಿರುವ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್‌ಗಳ ಸಂಖ್ಯೆ ಎಷ್ಟು;

(ಆ) ಯಾವ ಗುಣ ಮಟ್ಟದ ಮತ್ತು ಗುಣ ವಿಶೇಷದ ಕಂಪ್ಯೂಟರ್ ಮತ್ತು ಲ್ಯಾಪ್ ಟಾಪ್ ವಿತರಿಸಲಾಗಿದೆ; ಟೆಂಡರ್ ಪ್ರಕ್ರಿಯೆಯನ್ನು ಯಾವ ಹಂತದಲ್ಲಿ ಮಾಡಲಾಗಿದೆ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ, ಯಾವ ಯಾವ ಸಂಸ್ಥೆಯವರಿಂದ ಎಷ್ಟು ಸಂಖ್ಯೆಯ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ; (ಜಿಲ್ಲಾವಾರು ಸರಬರಾಜುದಾರರ ಹೆಸರು ಮತ್ತು ವಿಳಾಸ ಪ್ರತಿ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್ ಬೆಲೆ, ಒಟ್ಟು ಕಂಪ್ಯೂಟರ್ ಸಂಖ್ಯೆ, ಒಟ್ಟು ತಗಲಿದೆ ವೆಚ್ಚ; (ಸಂಪೂರ್ಣ ವಿವರ ನೀಡುವುದು)

(ಈ) ಸರಬರಾಜುದಾರರು ಗ್ರಾಮ ಪಂಚಾಯತ್‌ಗಳಿಗೆ ಭೇಟಿ ನೀಡಿ ಸರ್ವೀಸ್ ಮತ್ತು ರಿಪೇರಿಯಂತಹ ಸೇವೆ ನೀಡದೇ ಇರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಉ) ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್ ಖರೀದಿಯಲ್ಲಿ ನಿಯಮ ಮೀರಿ ಅಧಿಕ ಮೊತ್ತಕ್ಕೆ ಖರೀದಿಸಿ ಅವ್ಯವಹಾರ ಮಾಡಿರುವುದು ನಿಜವೇ; ಈ ಬಗ್ಗೆ ತನಿಖೆ ನಡೆಸಲು ಸರ್ಕಾರ ಕೈಗೊಳ್ಳುವ ಕ್ರಮವೇನು?

## ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)) :–**

೨೯೪೪ (೩೩೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ವ್ಯಾಪಿಯ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ಶಿಕ್ಷಣ ನೀಡಿ ಅವರ ಹಿತ ಕಾಪಾಡುವಲ್ಲಿ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ;

(ಇ) ಪ್ರತಿ ಶಾಲೆಗಳಲ್ಲಿ ಕುಡಿಯುವ ನೀರು, ಬಾಲಕ–ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಇದೆಯೇ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಶಾಲೆಯ ಮಕ್ಕಳ ಮೇಲಿನ ದೌರ್ಜನ್ಯ ತಡೆಯುವ ನಿಟ್ಟಿನಲ್ಲಿ ಸಿಸಿ ಕ್ಯಾಮರ ಅಳವಡಿಕೆ ಕಾರ್ಯಕ್ರಮ ಯಾವ ಹಂತದಲ್ಲಿದೆ; ಸದರಿ ಕಾರ್ಯಕ್ರಮ ವಿಳಂಬವಾಗಲು ಕಾರಣಗಳೇನು; (ವಿವರ ನೀಡುವುದು)

(ಉ) ಮಕ್ಕಳ ಮೇಲಿನ ದೌರ್ಜನ್ಯ ತಡೆಯುವುದೂ ಸೇರಿದಂತೆ ಸರ್ಕಾರಿ ಶಾಲೆಗಳ ಮೂಲಭೂತ ಸೌಕರ್ಯ ಹಾಗೂ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ?

## SCP ಅಡಿಯಲ್ಲಿ ನಿಗಧಿಪಡಿಸಿರುವ ಅನುದಾನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೫ (೩೩೩೮) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾರ್ತಾ ಇಲಾಖೆಗೆ SCP ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಮಂಜೂರಾಗಿರುವ ಹಣ ಎಷ್ಟು; ಖರ್ಚಾಗಿರುವ ಹಣ ಎಷ್ಟು;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟು; ಹಣ ಖರ್ಚು ಮಾಡಲಾಗಿದೆ? (ವಿವರ ನೀಡುವುದು)

## ಬೆಂಗಳೂರಿನಲ್ಲಿರುವ ಕೊಳಚೆ ಪ್ರದೇಶಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೬ (೩೩೩೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಒಟ್ಟು ಅಧಿಕೃತ ಮತ್ತು ಅನಧಿಕೃತ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು;

(ಆ) ಎಷ್ಟು ಕೊಳಚೆ ಪ್ರದೇಶಗಳಿಗೆ ಹಕ್ಕುಪತ್ರ ವಿತರಿಸಲಾಗಿದೆ;

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಕೊಳಚೆ ಪ್ರದೇಶಗಳಲ್ಲಿ ಮನೆಗಳನ್ನು ಕಟ್ಟಿ ಕೊಡಲಾಗಿದೆ?

## SCP ಅನುದಾನ ಬಳಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭ (೩೩೩೬) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾಗಿರುವ SCP ಹಣದ ಮೊತ್ತ ಎಷ್ಟು; ಖರ್ಚಾಗಿರುವ ಮೊತ್ತ ಎಷ್ಟು; ಬಾಕಿ ಉಳಿದಿರುವ ಹಣ ಎಷ್ಟು;

(ಆ) ಯಾವ ಯಾವ ಉದ್ದೇಶಗಳಿಗೆ SCP ಹಣವನ್ನು ಖರ್ಚು ಮಾಡಬೇಕಾಗಿದೆ;

(ಇ) ಹಾಗಿದ್ದಲ್ಲಿ, ೩ ವರ್ಷಗಳಲ್ಲಿ ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ;

(ಈ) ಮೇಲಿನ ೩ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ SCP ಅಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಟ್ಯಾಕ್ಸಿ ವಿತರಿಸಲು ನಿಗಧಿಪಡಿಸಿರುವ ಸಂಖ್ಯೆ ಎಷ್ಟು; ಖರ್ಚು ಮಾಡಬೇಕಾದ ಹಣ ಎಷ್ಟು; ಎಷ್ಟು ಹಣ ಖರ್ಚು ಮಾಡಲಾಗಿದೆ;

(ಉ) ಖರ್ಚಾಗದೆ ಬಾಕಿ ಉಳಿದಿರುವ ಹಣವನ್ನು ಯಾವಾಗ ಖರ್ಚು ಮಾಡಲಾಗುವುದು?

## ಸಣ್ಣ ಕೈಗಾರಿಕೆ ಇಲಾಖೆಯಿಂದ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ನಿವೇಶನ/ಮಳಿಗೆ ಹಂಚಿಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೮ (೩೩೩೯) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳದ ೩ ವರ್ಷಗಳಲ್ಲಿ ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಹಂಚಿಕೆ ಮಾಡಿರುವ ನಿವೇಶನಗಳು ಎಷ್ಟು ಮತ್ತು ಕೈಗಾರಿಕೆ ಮಳಿಗೆಗಳ ಸಂಖ್ಯೆ ಎಷ್ಟು;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಲಭ್ಯವಿರುವ ಸಹಾಯಧನವನ್ನು ಯಾವ ವರ್ಷದವರೆಗೆ ನೀಡಲಾಗಿದೆ;

(ಇ) ಸಹಾಯಧನ ನೀಡದೆ ಬಾಕಿ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕೈಗಾರಿಕೆಗಳು ಯಾವುವು;

(ಈ) ಹಾಗಿದ್ದಲ್ಲಿ, ಈ ಕೈಗಾರಿಕೆಗಳಿಗೆ ಸಹಾಯಧನ ನೀಡಲಾಗುವುದು ಯಾವಾಗ ?

## ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೯ (೩೩೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಎಷ್ಟು ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ ; ಅವು ಯಾವುವು ; (ವಿವರ ನೀಡುವುದು)

(ಆ) ಈ ಹುದ್ದೆಗಳಿಗೆ ನೇಮಕ ಮಾಡಿಕೊಂಡ ವಿಧಾನ ಯಾವುದು ;

(ಇ) ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವುದು ಸೂಕ್ತವೇ ;

(ಈ) ಈ ಹುದ್ದೆಗಳಿಗೆ ಇಲಾಖೆಯವರನ್ನೇ ನೇಮಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ?

## ಗ್ರಾಮ ಪಂಚಾಯ್ತಿ ಕಾರ್ಯದರ್ಶಿ ಮತ್ತು ಪಿ.ಡಿ.ಓ.ಗಳ ಮೇಲೆ ಅನಗತ್ಯವಾಗಿ ಇಲಾಖಾ ವಿಚಾರಣೆಯೇರುತ್ತಿರುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೦ (೩೪೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನಗತ್ಯವಾಗಿ ಕಾರ್ಯದರ್ಶಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮೇಲೆ ಇಲಾಖಾ ವಿಚಾರಣೆಯೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ೨೦೧೩ ರಿಂದ ೨೦೧೫ರವರೆಗೆ ಎಷ್ಟು ಕಾರ್ಯದರ್ಶಿ ಮತ್ತು ಪಿ.ಡಿ.ಓ. ಗಳನ್ನು ಅಮಾನತ್ತು ಮಾಡಲಾಗಿದೆ ಮತ್ತು ಇಲಾಖಾ ವಿಚಾರಣೆಗೆ ಆದೇಶಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸಲು ಇರುವ ಅವಧಿಯೆಷ್ಟು ;

(ಈ) ನಿಗಧಿತ ಅವಧಿ ಮುಗಿದರೂ ಎಷ್ಟು ಅಧಿಕಾರಿಗಳ ಮೇಲಿರುವ ಇಲಾಖಾ ವಿಚಾರಣೆ ಪೂರ್ಣಗೊಂಡಿರುವುದಿಲ್ಲ ?

## ಗ್ರಾಮ ಪಂಚಾಯತಿಗಳು ತಡವಾಗಿ ನಮೂನೆ–೯ಅನ್ನು ವಿತರಿಸುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೧ (೩೩೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳಲ್ಲಿ ಫಾರಂ–೯ಅನ್ನು ನಿಗಧಿತ ಅವಧಿಯಲ್ಲಿ ( "ಸಕಾಲ"ದಲ್ಲಿ ತಿಳಿಸಿರುವ ಅವಧಿಯಲ್ಲಿ ) ನೀಡಲಾಗುತ್ತಿದೆಯೇ ;

(ಆ) ಇಲ್ಲವಾದಲ್ಲಿ, ವಿಳಂಬವಾಗಲು ಕಾರಣ ಏನು ;

(ಇ) ಇ–ಸ್ವತ್ತು ತಂತ್ರಾಂಶದಲ್ಲಿ ನಮೂನೆ–೯ ವಿತರಿಸಲು ತೆಗೆದುಕೊಳ್ಳುವ ಸಮಯ (ದಿನಗಳಲ್ಲಿ) ಎಷ್ಟು ;

(ಈ) ವಿಳಂಬ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ?

## ಶಾಲಾ ದಾಖಲಾತಿಗೆ ವಯೋಮಾನದಲ್ಲಿ ಬಿನ್ನತೆಯಿರುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೨ (೩೪೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಜ್ಯಪಠ್ಯಕ್ರಮ ಸಿ.ಬಿ.ಎಸ್.ಇ., ಮತ್ತು ಐ.ಸಿ.ಎಸ್.ಸಿ., ಇವುಗಳಿಗೆ ೧ನೇ ತರಗತಿಗೆ ದಾಖಲಾಗಲು ಇರುವ ವಯೋಮಿತಿಯೆಷ್ಟು ;

(ಆ) ಇವುಗಳಲ್ಲಿ ದಾಖಲಾಗಲು ಇರುವ ಕನಿಷ್ಠ ವಯಸ್ಸಿನ ಮಿತಿಯಲ್ಲಿ ವ್ಯತ್ಯಾಸವಿದೆಯೇ ;

(ಇ) ಇದ್ದಲ್ಲಿ ಏಕರೀತಿಯ ವಯಸ್ಸಿನ ನಿಗಧಿಗೆ ಸರ್ಕಾರ ಇಚ್ಛಿಸಿದೆಯೇ ?

## ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳ ಮುಂಬಡ್ತಿ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೦೩ (೩೩೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೯ನೇ ಸಾಲಿನಲ್ಲಿ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮುಖ್ಯ ಶಿಕ್ಷಕರುಗಳಾಗಿ ನೇಮಕಗೊಂಡಿರುವವರ ಸಂಖ್ಯೆ ಎಷ್ಟು ;

(ಆ) ಸದರಿ ಮುಖ್ಯ ಶಿಕ್ಷಕರುಗಳಲ್ಲಿ ಇದುವರೆವಿಗೆ ಬಡ್ತಿ ಹೊಂದಿರುವವರ ಸಂಖ್ಯೆ ಎಷ್ಟು ; ಹಾಗೂ ಬಡ್ತಿ ಹೊಂದಬೇಕಾಗಿರುವವರ ಸಂಖ್ಯೆ ಎಷ್ಟು ;

(ಇ) ಈ ಮುಖ್ಯ ಶಿಕ್ಷಕರುಗಳಿಗೆ ಕಾಲಕಾಲಕ್ಕೆ ಸಿಗಬೇಕಾದ ಬಡ್ತಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಡ್ತಿ ಹೊಂದದೇ ಉಳಿದ ಅರ್ಹ ಮುಖ್ಯ ಶಿಕ್ಷಕರುಗಳಿಗೆ ಯಾವ ಕಾಲ ಮಿತಿಯೊಳಗೆ ಬಡ್ತಿ ನೀಡಲಾಗುವುದು ? (ವಿವರ ನೀಡುವುದು)

## ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೦೪ (೩೩೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳು ಖಾಲಿಯಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿರುವ ಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಗ್ರಂಥಾಲಯ ಕಟ್ಟಡ ನಿರ್ಮಾಣ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೦೫ (೩೩೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಹಿರೇಬಾಗೇವಾಡಿಯಲ್ಲಿ ಗ್ರಂಥಾಲಯಕ್ಕೆ ಸುಸಜ್ಜಿತವಾದ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದೇ ;

(ಇ) ಸದರಿ ಗ್ರಾಮದಲ್ಲಿ ಜನಸಂಖ್ಯೆ ಈ ಮೊದಲಿಗಿಂತ ಹೆಚ್ಚಾಗಿದ್ದು, ಇನ್ನೊಂದು ಗ್ರಂಥಾಲಯದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇನ್ನೊಂದು ಗ್ರಂಥಾಲಯ ಪ್ರಾರಂಭಿಸಲು ಪರಿಶೀಲಿಸಲಾಗುವುದೇ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೦೬ (೩೩೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಮುಖ್ಯವಾಗಿ, ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿಯಿರುವ ಪಿ.ಡಿ.ಓ. ಕಾರ್ಯದರ್ಶಿ ಗ್ರೇಡ್–೧, ಕಾರ್ಯದರ್ಶಿ ಗ್ರೇಡ್–೨ ಹಾಗೂ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಹುದ್ದೆಗಳು ಖಾಲಿಯಿರುವುದರಿಂದ ಇಲಾಖೆಯ ಅಭಿವೃದ್ಧಿ ಕಾರ್ಯಗಳು ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದರೆ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಉ) ಸಲ್ಲಿಸದಿದ್ದಲ್ಲಿ, ಎಷ್ಟು ದಿನಗಳೊಳಗಾಗಿ ಪ್ರಸ್ತಾವನೆಯನ್ನು ಕಳುಹಿಸಲಾಗುವುದು ?

## ರಾಜ್ಯದ ಗಡಿ ಚೆಕ್ ಪೋಸ್ಟ್‌ಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೦೭ (೩೩೫೦) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಒಟ್ಟು ಎಷ್ಟು ಗಡಿ ಚೆಕ್ ಪೋಸ್ಟ್‌ಗಳನ್ನು ಹೊಂದಿದೆ ;

(ಆ) ರಾಜ್ಯದ ಗಡಿ ಚೆಕ್ ಪೋಸ್ಟ್‌ಗಳಲ್ಲಿ ಅಂತರ್‌ರಾಜ್ಯ ಖನಿಜ ಸಾಗಾಣಿಕೆಯನ್ನು ನಿಯಂತ್ರಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಅಕ್ರಮ ಖನಿಜ ಸಾಗಣೆ ಮಾಡುವುದನ್ನು ತಡೆಗಟ್ಟಲು, ಗಡಿ ಚೆಕ್ ಪೋಸ್ಟ್‌ಗಳಲ್ಲಿ, ಮೂಲಭೂತ ಸೌಲಭ್ಯಗಳಾದ, ಸಿ.ಸಿ.ಟಿ.ವಿ. ಮತ್ತು ವೇ–ಬ್ರಿಡ್ಜ್ ಹಾಗೂ ಮತ್ತಿತರೆ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಹಾಗಾದರೆ, ಎಷ್ಟು ಗಡಿ ಚೆಕ್ ಪೋಸ್ಟ್‌ಗಳು ಸಿ.ಸಿ.ಟಿ.ವಿ. ಮತ್ತು ವೇ–ಬ್ರಿಡ್ಜ್ ಸೌಲಭ್ಯವನ್ನು ಹೊಂದಿರುತ್ತವೆ ; ಇಂತಹ ಸೌಲಭ್ಯಗಳಿಲ್ಲದ ಚೆಕ್ ಪೋಸ್ಟ್‌ಗಳ ಸಂಖ್ಯೆ ಎಷ್ಟು ;

(ಉ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಹೊಂದದೇ ಇರುವ ಗಡಿ ಚೆಕ್ ಪೋಸ್ಟ್‌ಗಳಲ್ಲಿ ಸಿ.ಸಿ.ಟಿ.ವಿ. ಮತ್ತು ವೇ–ಬ್ರಿಡ್ಜ್ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಯಾವ ಕಾಲಮಿತಿಯೊಳಗೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ವೇತನ ತಾರತಮ್ಯ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೦೦೮ (೩೭೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢಶಾಲಾ ಮುಖ್ಯೋಪಾಧ್ಯಯರು ಮತ್ತು ತತ್ಸಮಾನ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಹಾಗೂ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ನೀಡುತ್ತಿರುವ ವೇತನ ಎಷ್ಟು ; ಇವರಿಗೆ ವೇತನ ನೀಡುವಲ್ಲಿ ತಾರತಮ್ಯ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ವೇತನ ತಾರತಮ್ಯವಾಗಲು ಕಾರಣವೇನು ; ವೇತನ ತಾರತಮ್ಯ ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಬಗ್ಗೆ ಕುಮಾರ್‌ನಾಯಕ್‌ರವರ ವರದಿಯನ್ನು ಸರ್ಕಾರ ಅನುಷ್ಠಾನಕ್ಕೆ ತಂದಿದೆಯೇ ; ಅನುಷ್ಠಾನಕ್ಕೆ ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ?

## ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ MSIL ಭ್ರಷ್ಠಾಚಾರದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೦೦೯ (೩೩೫೧) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (MSIL)ನಲ್ಲಿ ಕಳೆದ ಎರಡು ವರ್ಷಗಳಲ್ಲಿ ಬೆಳಕಿಗೆ ಬಂದ ಹಣಕಾಸು ಅವ್ಯವಹಾರ, ಅಧಿಕಾರಿಗಳ ದುರುಪಯೋಗ, ಕರ್ತವ್ಯಲೋಪ ಹಾಗೂ ಭ್ರಷ್ಠಾಚಾರ ಪ್ರಕರಣಗಳೆಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಿಂದ ರಾಜ್ಯಕ್ಕೆ ಎಷ್ಟು ಪ್ರಮಾಣದ ನಷ್ಟ ಉಂಟಾಗಿದೆ ; ಇದಕ್ಕೆ ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ರೈಲ್ವೆ ಯೋಜನೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೦೧೦ (೩೭೨೩) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಸಹಭಾಗಿತ್ವದಲ್ಲಿ ಇದೂವರೆಗೂ ಹೊಸದಾಗಿ ಮಂಜೂರಾಗಿರುವ ರೈಲ್ವೆ ಯೋಜನೆಗಳಾವುವು ; ಪ್ರಸ್ತುತ ಹೈದರಾಬಾದ್–ಕರ್ನಾಟಕ ಭಾಗದಲ್ಲಿ ರೈಲ್ವೆ ಮಾರ್ಗ ಹಾಗೂ ಕಿ.ಮೀ. ವ್ಯಾಪ್ತಿಯ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರಗತಿಯಲ್ಲಿರುವ ರೈಲ್ವೆ ಯೋಜನೆಗಳು ಯಾವುವು ; ಎಷ್ಟು ಯೋಜನೆಗಳು ಬಾಕಿ ಇವೆ ; ಕುಂಟಿತಗೊಂಡಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ?

## ಖಾಲಿ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೦೧೧ (೩೭೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತತ್ಸಮಾನ ವೃಂದದಲ್ಲಿ (BEO & Equelant) ಮಂಜೂರಾದ ಹುದ್ದೆಗಳೆಷ್ಟು ;

(ಆ) ರಾಜ್ಯವಲಯ ಮತ್ತು ಹೈದರಾಬಾದ್–ಕರ್ನಾಟಕದಲ್ಲಿ ಭರ್ತಿಯಾಗಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಕ್ಷೇತ್ರವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇದುವರೆಗೂ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೦೧೨ (೩೭೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯನ್ನು ಕಾನೂನಾತ್ಮಕವಾಗಿರುವ ತೊಡಕುಗಳನ್ನು ಇತ್ಯರ್ಥಪಡಿಸದೇ ವಿಳಂಬ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಮೂರು ತಿಂಗಳು ಕಳೆದರು ನೇಮಕಾತಿ ಪ್ರಕ್ರಿಯೇ ಹಾಗೂ ಆಯ್ಕೆ ಪಟ್ಟಿ ಪ್ರಕಟಿಸದೇ ಇರುವುದಕ್ಕೆ ಕಾರಣಗಳೇನು ಕಾನೂನಾತ್ಮಕವಾಗಿರುವ ತೊಡಕುಗಳನ್ನು ಆದಷ್ಟು ಬೇಗ ಇತ್ಯರ್ಥಪಡಿಸಿ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ನಿಗಧಿಪಡಿಸಿರುವ ಟಿಇಟಿ ಹಾಗೂ ಸಿಇಟಿ ಅಂಕಗಳೆಷ್ಟು ; (ಸಂಬಂಧಪಟ್ಟ ಎಲ್ಲಾ ಸರ್ಕಾರಿ ಆದೇಶ ಪ್ರತಿಗಳನ್ನು ನೀಡುವುದು)

(ಈ) ಹೊಸದಾಗಿ ಎಷ್ಟು ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ಹಾಗೂ ನೇಮಕಾತಿಗೆ ಆದೇಶಿಸಲಾಗಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕೈಗಾರಿಕೆ ಹೂಡಿಕೆಗೆ ಬಂಡವಾಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೩ (೩೩೫೫) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸ ಸರ್ಕಾರ ಬಂದಾಗಿನಿಂದ ರಾಜ್ಯದ ಯಾವ ಯಾವ ಸ್ಥಳದಲ್ಲಿ ಕೈಗಾರಿಕಾ ಹೂಡಿಕೆ ಬಂಡವಾಳಕ್ಕೆ ಸರ್ಕಾರ ಮುಂದಾಗಿದೆ ; ಎಲ್ಲೆಲ್ಲಿ ಯಾವ ಕೈಗಾರಿಕೆ ಸ್ಥಾಪಿಸಲಾಗುವುದು ; ಆ ಬಂಡವಾಳದ ಮೊತ್ತವೆಷ್ಟು ; (ವಿವರ ಒದಗಿಸುವುದು)

(ಆ) ಇದರಿಂದಾಗಿ ಎಷ್ಟು ಸಂಖ್ಯೆಯ ಉದ್ಯೋಗಗಳನ್ನು ಸೃಷ್ಟಿಸಬಹುದಾಗಿದೆ ಎಂದು ಅಂದಾಜು ಮಾಡಲಾಗಿದೆ ; ಅಂತಹ ಕಂಪನಿಗಳು ಯಾವುವು ; ಸದರಿ ಕಂಪನಿಗಳು ಯಾವ ವಲಯದಲ್ಲಿ ಹೆಚ್ಚಿನ ಆಸಕ್ತಿ ವಹಿಸಿವೆ ;

(ಇ) ಈ ರೀತಿಯ ಕಾರ್ಯಕ್ರಮದಡಿಯಲ್ಲಿ ಕಳೆದ ೩ ವರ್ಷಗಳಿಂದ ಎಷ್ಟು ಹಾಗೂ ಯಾವ ಕಂಪನಿಗಳ ಯೋಜನೆಗಳಿಗೆ ಸಮ್ಮತಿ ನೀಡಲಾಗಿದೆ ;

(ಈ) ಅದೇ ರೀತಿ ಈ ವರ್ಷ ಎಷ್ಟು ಯೋಜನೆಗಳಿಗೆ ಒಪ್ಪಿಗೆ ಕೊಡಲಾಗಿದೆ ; ಕಳೆದ ಮೂರು ವರ್ಷಗಳ ಯೋಜನೆಗಳ ಸಾಧಕ–ಬಾಧಕಗಳೇನು ; ಸದರಿ ಯೋಜನೆಗಳ ಪ್ರಗತಿ ಯಾವ ಹಂತದಲ್ಲಿದೆ ? (ಜಿಲ್ಲಾವಾರು ವಿವರ ನೀಡುವುದು)

## ಕೈಗಾರಿಕಾ ವಲಯಗಳಿಗೆ ಭೂಮಿ ಮಂಜೂರು ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೪ (೩೩೫೩) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೈಗಾರಿಕಾ ವಲಯದ ಉದ್ದೇಶಗಳಿಗಾಗಿ ಭೂಮಿ ನೀಡುವಾಗ ಅನುಸರಿಸುವ ಮಾನದಂಡಗಳೇನು ; ಸರ್ಕಾರವು ಭೂಮಿಯನ್ನು ಕೆ.ಐ.ಎ.ಡಿ.ಬಿ. ಮೂಲಕ ಕೈಗಾರಿಕೆಗಳಿಗೆ ಹಂಚಿಕೆ ಮಾಡುವುದೇ ; (ವಿವರ ನೀಡುವುದು)

(ಆ) ಯಾವ ಆಧಾರದ ಮೇಲೆ ಭೂಮಿಯನ್ನು ಕೈಗಾರಿಕೆಗಳಿಗೆ ನೀಡಲಾಗುತ್ತದೆ ;

(ಇ) ಗುತ್ತಿಗೆ ಆಧಾರದ ಮೇಲೆ ನೀಡುವುದಾದಲ್ಲಿ ಎಷ್ಟು ವರ್ಷದ ಅವಧಿಗೆ ನೀಡಲಾಗುತ್ತಿದೆ ; ಇದನ್ನು ಈಗ ಬದಲಾವಣೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಈ ಗುತ್ತಿಗೆ ಅವಧಿಯನ್ನು ಕಡಿಮೆ ಅಥವಾ ಜಾಸ್ತಿ ಮಾಡಲು ಸರ್ಕಾರ ಮುಂದಾಗಿದೆಯೇ ;

(ಉ) ಇದು ಯಾವಾಗಿನಿಂದ ಜಾರಿಗೆ ಬರುತ್ತದೆ ? (ವಿವರ ಒದಗಿಸುವುದು)

# ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿನ ಖಾತೆಗಳು ಮತ್ತು ಅಕ್ರಮ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೫ (೩೩೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಾವಿರ ಕೋಟಿ ಮೊತ್ತದ ಅಕ್ರಮ ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಈ ಹಣವು ವೆಚ್ಚವಾಗದೇ, ಇದಕ್ಕೆ ದಾಖಲೆಗಳು ಲಭ್ಯವಾಗದೇ ಲೆಕ್ಕಕ್ಕೂ ಸಿಗದಿರುವ ದೊಡ್ಡ ಅಕ್ರಮವೆಂಬುದು ನಿಜವೇ ;

(ಇ) ಈ ಅಕ್ರಮಗಳು ಜರುಗಿದ್ದು ಯಾವಾಗ ; ಇದನ್ನು ಪತ್ತೆ ಮಾಡಿದ್ದು ಹೇಗೆ ; ಇದಕ್ಕೆ ಕಾರಣರಾದವರು ಯಾರು ; ಇವರುಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಈ ಹಣ ವಸೂಲಿಗೆ ಸರ್ಕಾರ ಮುಂದಾಗುವುದೇ ; ಇಂತಹ ಅಕ್ರಮಗಳ ತಡೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಸಂಬಂಧಪಟ್ಟವರ ಮೇಲೆ ಶಿಸ್ತು ಕ್ರಮ ಜರುಗಿಸಲಾಗಿದೆಯೇ ; (ವಿವರ ನೀಡುವುದು)

(ಉ) ಇಲ್ಲಿಯವರೆಗೆ ಎಷ್ಟು ಹಣ ಮತ್ತು ಬ್ಯಾಂಕ್ ಖಾತೆ ಪತ್ತೆ ಹಚ್ಚಲಾಗಿದೆ ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಪ್ರವಾಸೋದ್ಯಮ ಕ್ಷೇತ್ರಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೬ (೩೩೫೬) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಪ್ರವಾಸೋದ್ಯಮ ಕ್ಷೇತ್ರಗಳ ಅಭಿವೃದ್ಧಿಗೆ ಬಂಡವಾಳ ಹೂಡಿಕೆ ಮಾಡಲು ಮುಂದೆ ಬಂದಿರುವಂತಹ ಕಂಪನಿಗಳು ಯಾವುವು ; ಯಾವ ಉದ್ದೇಶಕ್ಕೆ ಎಷ್ಟು ಮೊತ್ತದ ಬಂಡವಾಳವನ್ನು ಹೂಡಲಿದ್ದಾರೆ ; (ವಿವರ ಒದಗಿಸುವುದು)

(ಆ) ಇದಕ್ಕಾಗಿ ರಾಜ್ಯ ಸರ್ಕಾರ ಗುರುತಿಸಿರುವ ಪ್ರವಾಸೋದ್ಯಮ ಸ್ಥಳಗಳಾವುವು ; (ಯೋಜನೆಗಳ ವಿಸ್ತೃತ ವರದಿಯನ್ನು ನೀಡುವುದು)

(ಇ) ಈ ಕ್ಷೇತ್ರದಲ್ಲಿ ಬಂಡವಾಳಕ್ಕೆ ಆಸಕ್ತಿ ತೋರಿಸಿರುವ ಕಂಪನಿಗಳಾವುವು ; (ಬಂಡವಾಳದ ಮೊತ್ತದ ವಿವರವನ್ನು ಕಂಪನಿವಾರು ಒದಗಿಸುವುದು)

(ಈ) ಇದರಿಂದ ರಾಜ್ಯಕ್ಕೆ ಹರಿದುಬರಲಿರುವ ಬಂಡವಾಳವೆಷ್ಟು ; ಈ ಪೈಕಿ ಇದಕ್ಕಾಗಿ ಗುರುತಿಸಿದ ಸ್ಥಳಗಳು ಎಷ್ಟು ; ಎಲ್ಲೆಲ್ಲಿ ; (ವಿವರ ನೀಡುವುದು)

(ಉ) ಸದರಿ ಯೋಜನೆಯಡಿ ಜೋಗದ ಜಲಪಾತ ವೀಕ್ಷಣೆ ಸ್ಥಳವು ಸೇರಿದೆಯೇ ; ಜಲಪಾತವನ್ನು ವರ್ಷವಿಡಿ ವೀಕ್ಷಣೆಗೆ ಅನುಕೂಲ ಮಾಡಿಕೊಡುವ ಬಗ್ಗೆ ಸರ್ಕಾರ ಉದ್ದೇಶಿಸಿದೆಯೇ ; ಈ ಯೋಜನೆಯ ರೂಪು–ರೇಷೆಗಳೇನು ; ಇದೇ ರೀತಿ ಬೇರೆ ಯಾವ ಜಲಪಾತಗಳನ್ನು ಈ ಯೋಜನೆಯಡಿ ತರಲುದ್ದೇಶಿಸಿದೆ ? (ವಿವರ ಒದಗಿಸುವುದು)

# ಸರ್ಕಾರಿ ಪ್ರೌಢಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್ 'ಡಿ' ನೌಕರರುಗಳ ವೇತನ ಸಂದಾಯದ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೧೨ (೩೬೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಗ್ರೂಪ್ ಡಿ ಹುದ್ದೆಗಳಲ್ಲಿ, ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ;

(ಆ) ಈ ಹೊರಗುತ್ತಿಗೆ ನೌಕರರುಗಳನ್ನು ಯಾವ ಏಜೆನ್ಸಿಯ ಮೂಲಕ ನೇಮಕ ಮಾಡಿಕೊಳ್ಳಲಾಗಿದೆ ; (ಏಜೆನ್ಸಿಯ ಪೂರ್ಣ ವಿವರ ಹಾಗೂ ವಿಳಾಸ ನೀಡುವುದು)

(ಇ) ಈ ಗ್ರೂಪ್ ಡಿ ನೌಕರರುಗಳಿಗೆ ಇಲಾಖೆ ನಿಗಧಿಪಡಿಸಿದ ವೇತನದ ಮೊತ್ತವೆಷ್ಟು ; ಏಜೆನ್ಸಿಯವರು ನೀಡುತ್ತಿರುವ ವೇತನವೆಷ್ಟು ;

(ಈ) ನೌಕರರ ಭವಿಷ್ಯ ನಿಧಿಯ ವಂತಿಗೆಯನ್ನು ಕಡಿತಗೊಳಿಸಿದ್ದಲ್ಲಿ ಅದರ ವಿವರವನ್ನು ಗುತ್ತಿಗೆ ನೌಕರರುಗಳಿಗೆ ಪ್ರತಿ ಮಾಹೆ ನೀಡಲಾಗುತ್ತಿದೆಯೇ ;

(ಉ) ಈ ನೌಕರರುಗಳಿಗೆ ನಿಗಧಿಪಡಿಸಿದ ಮಾಸಿಕ ರೂ. ೮೬೦೦ ರೂ.ಗಳಲ್ಲಿ ಕೇವಲ ೪೦೦೦/– ರೂ.ಗಳನ್ನು ಮಾತ್ರ ಸಂದಾಯ ಮಾಡಿ, ಪೂರ್ಣ ಮೊತ್ತಕ್ಕೆ ಸಹಿ ಪಡೆಯುತ್ತಿದ್ದು, ಇದನ್ನು ಇಲಾಖೆ/ ಸರ್ಕಾರ ಗಮನಿಸಿದೆಯೇ ;

(ಊ) ಕಡಿಮೆ ವೇತನ ನೀಡಿ ಹೊರಗುತ್ತಿಗೆ ನೌಕರರುಗಳಿಗೆ ಅನ್ಯಾಯವೆಸಗುತ್ತಿರುವ ಏಜೆನ್ಸಿಯ ವಿರುದ್ಧ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದರೊಂದಿಗೆ, ಉಳಿಕೆ ಮೊತ್ತವನ್ನು ನೌಕರರುಗಳಿಗೆ ಸಂದಾಯ ಮಾಡಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ ?

# ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಹುದ್ದೆಗಳನ್ನು ಭರ್ತಿಗೊಳಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೧೮ (೩೩೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; (ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ವಿವರವನ್ನು ಪ್ರತ್ಯೇಕವಾಗಿ ನೀಡುವುದು)

(ಇ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಪಕರುಗಳ ಸಾಕಷ್ಟು ಹುದ್ದೆಗಳು ಖಾಲಿ ಇರುವುದರಿಂದ, ಸೂಕ್ತ ತರಬೇತಿ ಇಲ್ಲದೆ, ವಿದ್ಯಾರ್ಥಿಗಳಲ್ಲಿನ ಕ್ರೀಡಾ ಆಸಕ್ತಿ ಕುಂಠಿತಗೊಂಡಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ವಿದ್ಯಾರ್ಥಿಗಳು ಉತ್ತಮ ಆರೋಗ್ಯ ಹೊಂದುವ ನಿಟ್ಟಿನಲ್ಲಿ, ಕ್ರೀಡಾ ಮನೋಭಾವವನ್ನು ಹೆಚ್ಚಿಸಲು ಸಹಕಾರಿಯಾಗುವಂತೆ, ಪದವಿ ಪೂರ್ವ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

# ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಂದ ವಿಭಜಿತಗೊಂಡ ಸರ್ಕಾರಿ ಪ್ರೌಢ ಶಾಲೆಗಳಿಗೆ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೯೯ (೩೩೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಂದ ವಿಭಜಿತಗೊಂಡ ಜಿಲ್ಲಾವಾರು ಪ್ರೌಢ ಶಾಲೆಗಳು ಎಷ್ಟು ;

(ಆ) ವಿಭಜಿತಗೊಂಡ ಪ್ರೌಢ ಶಾಲೆಗಳ ಆಡಳಿತ ಹಾಗೂ ವೇತನ ಬಟವಾಡೆ ಪ್ರಾಧಿಕಾರವನ್ನು ಪ್ರಸ್ತುತ ಯಾರು ನಿರ್ವಹಿಸುತ್ತಿದ್ದಾರೆ ;

(ಇ) ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಂದ ವಿಭಜಿತಗೊಂಡ ಪ್ರೌಢ ಶಾಲೆಗಳಲ್ಲಿ ಮುಖ್ಯ ಶಿಕ್ಷಕರ ಹುದ್ದೆಗಳ ಮಂಜೂರಾತಿ ಇಲ್ಲದಿರುವುದರಿಂದ ಹಿರಿಯ ಸಹ ಶಿಕ್ಷಕರುಗಳು, ತಮ್ಮ ವರ್ಗಗಳ ಪಾಠಗಳನ್ನು ಬೋಧಿಸುವುದರೊಂದಿಗೆ ಶಾಲೆಯ ಆಡಳಿತವನ್ನು ನಿರ್ವಹಿಸುತ್ತಿದ್ದು, ಇದರಿಂದ ಹಿರಿಯು ಸಹ ಶಿಕ್ಷಕರು ತೆಗೆದುಕೊಳ್ಳುತ್ತಿರುವ ವರ್ಗಗಳ ಬೋಧನಾ ಕಾರ್ಯದ ಮೇಲೆ ಪರಿಣಾಮ ಬೀರಿ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ವಿಭಜಿತ ಪ್ರೌಢ ಶಾಲೆಗಳಿಗೆ ಮುಖ್ಯ ಶಿಕ್ಷಕರುಗಳ ಹುದ್ದೆಗಳನ್ನು ಮಂಜೂರು ಮಾಡಿ ಹಿರಿಯ ಶಿಕ್ಷಕರ ಕಾರ್ಯಭಾರದ ಒತ್ತಡವನ್ನು ಕಡಿಮೆ ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಕಾರ್ಖಾನೆಗಳನ್ನು ಮುಚ್ಚಿ ಅದರಿಂದ ಆಗುತ್ತಿರುವ ನೌಕರರ ಸಮಸ್ಯೆಯ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೦ (೩೩೬೦) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ಕಳೆದ ೧೫ ವರ್ಷಗಳಿಂದ ವಿವಿಧ ಕಾರಣಗಳಿಗಾಗಿ ಅದರಲ್ಲೂ ನಷ್ಟದ ಕಾರಣಗಳಿಗಾಗಿ ಮುಚ್ಚಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ;

(ಇ) ಮುಚ್ಚಿರುವ ಕಾರ್ಖಾನೆಗಳ ವಿರುದ್ಧ ಅಲ್ಲಿನ ಕಾರ್ಮಿಕರು ನ್ಯಾಯಾಲಯಗಳ ಮೊರೆ ಹೋಗಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; ನ್ಯಾಯಾಲಯಗಳಿಂದ ಸಂಸ್ಥೆಗಳನ್ನು ಮುಚ್ಚಿರುವ ಸರ್ಕಾರದ ಆದೇಶಗಳ ವಿರುದ್ಧ ತಡೆಯಾಜ್ಞೆ ನೀಡಿ ಆದೇಶ ಹೊರಡಿಸಿರುವ ಪ್ರಕರಣಗಳೆಷ್ಟು ;

(ಈ) ಈ ಆದೇಶಗಳ ಪ್ರಕಾರ ಅಲ್ಲಿನ ಕಾರ್ಮಿಕರಿಗೆ ದೊರೆಯಬೇಕಾದ ಮರುನೇಮಕಾತಿ/ವೇತನ/ಸವಲತ್ತುಗಳನ್ನು ನೀಡಲಾಗಿದೆಯೇ ಇಲ್ಲದಿದ್ದಲ್ಲಿ, ಯಾವ ಕಾರಣಗಳಿಗೆ ಇನ್ನು ನೀಡಲಾಗಿಲ್ಲ ; ಇದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ದೀರ್ಘಕಾಲದಿಂದ ಮುಂದುವರೆದಿರುವ ಮೈಸೂರು ಲ್ಯಾಂಪ್ಸ್‌ಗೆ ಸಂಬಂಧಪಟ್ಟ ನ್ಯಾಯಾಲಯದ ಪ್ರಕರಣವನ್ನು ಸಮಾಪ್ತಿಗೊಳಿಸಿ ಅಲ್ಲಿನ ಕಾರ್ಮಿಕರಿಗೆ ನ್ಯಾಯವನ್ನು ಒದಗಿಸಲು ಸರ್ಕಾರದ ಮುಂದಿನ ಕ್ರಮವೇನು ?

# ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಬಡ್ತಿ (P.D.O) ನೀಡುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೨ (೩೬೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಿಂದ ಮುಂದಿನ ಹುದ್ದೆಗೆ ಬಡ್ತಿ ನೀಡುವಾಗ ಯಾವ ಯಾವ ಮಾನದಂಡವನ್ನು ಪರಿಗಣಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಪ್ರಕಟಪಡಿಸಲಾಗಿದೆಯೇ ; ಹೌದಾದಲ್ಲಿ, ಯಾವ ದಿನಾಂಕದಂದು ಪ್ರಕಟಿಸಲಾಗಿದೆ ; (ಪಟ್ಟಿ ಒದಗಿಸುವುದು)

(ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಕರ್ನಾಟಕ ನಾಗರಿಕ ಸೇವಾ ನಿಯುಮಾವಳಿಯು ನಿಯಮದಂತೆ ಪ್ರಕಟಗೊಂಡಿದೆಯೇ ; ಹೌದಾದಲ್ಲಿ, ಯಾವ ಪ್ರಕರಣದಡಿ ಪಟ್ಟಿ ತಯಾರಿಸಲಾಗಿದೆ ;

(ಈ) ಅಂತರ್ ಜಿಲ್ಲಾ ವರ್ಗಾವಣೆಗೊಂಡ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಜೇಷ್ಠತಾ ಪಟ್ಟಿಯಲ್ಲಿ ಯಾವ ಸ್ಥಾನ ನೀಡಲಾಗಿದೆ ;

(ಉ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಪಂಚಾಯತ್ ನೌಕರರಿಗೆ ಎಷ್ಟು ಬಾರಿ ಪದೋನ್ನತಿ ನೀಡಬಹುದು ;

(ಊ) ಗ್ರಾಮ ಪಂಚಾಯತ್‌ನಲ್ಲಿ ಕರ ವಸೂಲಿಗಾರ, ಗುಮಾಸ್ತರಾಗಿ ಮತ್ತು ಪಂಪು ಚಾಲಕರಾಗಿ ಕೆಲಸ ನಿರ್ವಹಿಸಿ ನಂತರ ಪದೋನ್ನತಿ ಪಡೆದು ತಾಲ್ಲೂಕು ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಣಾಧಿಕಾರಿ, ಸಹಾಯಕ ಯೋಜನಾಧಿಕಾರಿ

ಮತ್ತು ಸಹಾಯಕ ಉಪ ಕಾರ್ಯದರ್ಶಿ ಹುದ್ದೆ ಪಡೆದ ನೌಕರರ ಹೆಸರು ಮತ್ತು ಸಂಖ್ಯೆ ಎಷ್ಟು? (ಜಿಲ್ಲಾವಾರು ಮೂಲ ಹುದ್ದೆ– ಪ್ರಸಕ್ತ ಹುದ್ದೆವಾರು ಹೆಸರು ಮತ್ತು ವಿದ್ಯಾರ್ಹತೆಯೊಂದಿಗೆ ಸಂಪೂರ್ಣ ವಿವರ ನೀಡುವುದು ಹಾಗೂ ಪದೋನ್ನತಿ ಪಡೆದು ನಿವೃತ್ತಿಯಾದವರ ವಿವರವನ್ನು ನೀಡುವುದು)

## ಗ್ರಾಮ ಪಂಚಾಯತ್ ರಾಜ್ ಇಲಾಖೆಯಲ್ಲಿ ೩ ಸ್ಥರಗಳಲ್ಲಿ ಮಂಜೂರಾದ ಹುದ್ದೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೩ (೩೬೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ೩ ಸ್ಥರಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ನಿಯೋಜನೆಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ವಿಲೀನಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ಈ ಸಂಬಂಧ ಆದೇಶ ಮತ್ತು ಸುತ್ತೋಲೆಗಳಿದ್ದಲ್ಲಿ ಪ್ರತಿ ನೀಡುವುದು)

(ಈ) ನಿಯಮ ೩೨ರ ಅಡಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಹುದ್ದೆಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಪದೋನ್ನತಿ ಪಡೆದ ನೌಕರರ ಸಂಖ್ಯೆ ಎಷ್ಟು ;

(ಉ) ಗ್ರಾಮ ಪಂಚಾಯತ್ ಕಾರ್ಯದರ್ಶಿಯಾಗಿದ್ದು, ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಪದೋನ್ನತಿ ಪಡೆದು ನಂತರ ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಣಾಧಿಕಾರಿ, ಸಹಾಯಕ ಯೋಜನಾಧಿಕಾರಿ ಮತ್ತು ಸಹಾಯಕ ಉಪ ಕಾರ್ಯದರ್ಶಿಯಾಗಿ ಪದೋನ್ನತಿ ಪಡೆದ ನೌಕರರ ಸಂಖ್ಯೆ ಎಷ್ಟು ? (ಜಿಲ್ಲಾವಾರು, ಹುದ್ದೆವಾರು ಹೆಸರು ಮತ್ತು ವಿದ್ಯಾರ್ಹತೆ ವಿವರ ನೀಡುವುದು)

## ತ್ರಿ ಸ್ಥರದ ಪಂಚಾಯತ್ ರಾಜ್ ವ್ಯವಸ್ಥೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೪ (೩೬೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತ್ರಿ ಸ್ಥರದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ 'ತಾಲ್ಲೂಕು ಸರ್ಕಾರ' ಎಂದು ಕರೆಸಿಕೊಳ್ಳುವ ತಾಲ್ಲೂಕು ಪಂಚಾಯತ್ತಿನ ಕಾರ್ಯನಿರ್ವಾಹಕ ಮುಖ್ಯಸ್ಥರು ಆಗಿರುವ ತಾಲ್ಲೂಕು ಪಂಚಾಯತ್ ಅಧ್ಯಕ್ಷರಿಗೆ ಹಾಗೂ ಉಪಾಧ್ಯಕ್ಷರಿಗೆ ಸರ್ಕಾರಿ ವಾಹನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಸರ್ಕಾರಿ ವಾಹನ ಸೌಲಭ್ಯ ಹೊಂದಿರುವ ಸಂದರ್ಭದಲ್ಲಿ ಕಾರ್ಯನಿರ್ವಾಹಕ

ಅಧಿಕಾರಿಯ ವಾಹನವನ್ನು ತಾಲ್ಲೂಕು ಪಂಚಾಯತ್ ಅಧ್ಯಕ್ಷರು ಅಧಿಕೃತ ಕೆಲಸ ನಿಮಿತ್ತ ಉಪಯೋಗಿಸುವ ಸಂದರ್ಭದಲ್ಲಿ ಅವಮಾನಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ತಾಲ್ಲೂಕು ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ತಮ್ಮ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಸರ್ಕಾರಿ ವಾಹನ ಒದಗಿಸಲು ಸರ್ಕಾರಕ್ಕಿರುವ ತೊಡಕುಗಳೇನು ;

(ಈ) ತಾಲ್ಲೂಕು ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ತಮ್ಮ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಸರ್ಕಾರಿ ವಾಹನ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಹಾಗಿದ್ದಲ್ಲಿ, ಕ್ರಮ ಕೈಗೊಳ್ಳಲಾಗುವುದು ಯಾವಾಗ ? (ಸಂಪೂರ್ಣ ವಿವರ ನೀಡುವುದು)

## ಕೇಂದ್ರ ಗ್ರಂಥಾಲಯಗಳಲ್ಲಿ ಸಹ ಗ್ರಂಥಪಾಲಕರ ಮತ್ತು ಸಹಾಯಕರ ಹುದ್ದೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೫ (೩೬೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಜಿಲ್ಲಾ/ನಗರ/ತಾಲ್ಲೂಕು ಕೇಂದ್ರ ಗ್ರಂಥಾಲಯಗಳಲ್ಲಿ ಸಹ ಗ್ರಂಥಪಾಲಕರ ಹಾಗೂ ಗ್ರಂಥಾಲಯ ಸಹಾಯಕರ ಹುದ್ದೆ ಖಾಲಿ ಇರುವುದರಿಂದ ತೊಂದರೆ ಉಂಟಾಗುತ್ತಿರುವುದು ನಿಜವಲ್ಲವೇ ;

(ಆ) ರಾಜ್ಯದ ವಿವಿಧ ಜಿಲ್ಲಾ/ನಗರ/ತಾಲ್ಲೂಕು ಕೇಂದ್ರ ಗ್ರಂಥಾಲಯಗಳಲ್ಲಿ ಸಹ ಗ್ರಂಥಪಾಲಕರ ಹಾಗೂ ಗ್ರಂಥಾಲಯ ಸಹಾಯಕರ ಹಾಗೂ ಇತರೆ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಇಲ್ಲವಾದಲ್ಲಿ, ಈ ಬಗ್ಗೆ ಇರುವ ತೊಡಕುಗಳೇನು ; ಯಾವಾಗ ನೇಮಕಾತಿ ಮಾಡುವುದು ?

## ೧೯೯೪-೯೫ನೇ ಸಾಲಿನವರಗೆ ಪ್ರಾರಂಭವಾಗಿದ್ದು ವೇತನಾನುದಾನ ನೀಡದೆ ಇರುವ ಶಾಲೆಗಳಿಗೆ ವೇತನಾನುದಾನ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೩೦೨೬ (೩೩೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧೯೮೬-೮೭ ರಿಂದ ೧೯೯೪-೯೫ನೇ ಅವಧಿಯಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಪ್ರಾಥಮಿಕ ಪ್ರೌಢಶಾಲೆ ಮತ್ತು ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಸದರಿ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ವೇತನಾನುದಾನ ನೀಡಲು ಸರ್ಕಾರ ತೀರ್ಮಾನಿಸಿದೆಯೇ ;

(ಇ) ಹಾಗಾದರೆ, ಇದುವರೆವಿಗೆ ಎಷ್ಟು ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಿ ವೇತನ ಬಿಡುಗಡೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಇತ್ತೀಚೆಗೆ ವೇತನಾನುದಾನಕ್ಕಾಗಿ ಸರ್ಕಾರಕ್ಕೆ ಬರುತ್ತಿರುವ ಕಡತಗಳನ್ನು ವೇತನಾನುದಾನಕ್ಕೊಳಪಡಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಾದರೆ ಯಾವ ಕಾಲಮಿತಿಯಲ್ಲಿ ಈ ಅವಧಿಯ ಎಲ್ಲಾ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೊಳಪಡಿಸಿ ವೇತನ ಬಿಡುಗಡೆ ಮಾಡಲಾಗುವುದು ?

## ಸರ್ವಶಿಕ್ಷಣ ಅಭಿಯಾನ ಹಾಗೂ ಆರ್.ಎಂ.ಎಸ್.ಎ ಯೋಜನೆಗಳ ಅನುಷ್ಠಾನದಲ್ಲಿನ ವಿಳಂಬದ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೦೨೭ (೩೩೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ವ ಶಿಕ್ಷಣ ಅಭಿಯಾನ ಹಾಗೂ ಆರ್.ಎಂ.ಎಸ್.ಎ. ಯೋಜನೆಗಳಿಗೆ ೨೦೧೨ ರಿಂದ ಇದುವರೆವಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗಳಡಿಯಲ್ಲಿ ಯಾವ ಯಾವ ಕಾಮಗಾರಿಗಳು ಹಾಗೂ ತರಬೇತಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿನ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಹಣದಲ್ಲಿ ಹಲವಾರು ಕಟ್ಟಡಗಳು ಅರ್ಧಕ್ಕೆ ನಿಂತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ರೀತಿ ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಈ) ಈ ಯೋಜನೆಗಳ ಕಾಮಗಾರಿಗಳನ್ನು ಯಾವ ಯಾವ ಏಜೆನ್ಸಿಗಳ ಮೂಲಕ ಯಾವ ರೀತಿ ನಿರ್ವಹಿಸಲಾಗುತ್ತಿದೆ ? (ವಿವರ ನೀಡುವುದು)

## ವೈದ್ಯನಾಥನ್ ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೦೨೮ (೩೩೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೈಹಿಕ ಶಿಕ್ಷಣ ಸಂಬಂಧ ಪ್ರೊ:ವೈದ್ಯನಾಥನ್ ವರದಿ ಆಧರಿಸಿ ವೃಂದ ಮತ್ತು ನೇಮಕಾತಿ ನಿಯಮಕ್ಕೆ ತಿದ್ದುಪಡಿ ಮಾಡಲು ರಾಜ್ಯ ಸರ್ಕಾರ ಒಪ್ಪಿಗೆ ಸೂಚಿಸಿದ್ದು ಯಾವಾಗ ;

(ಆ) ದೈಹಿಕ ಶಿಕ್ಷಣದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಬೇಕಾಗಿರುವ ಮುಖ್ಯ ಅಂಶಗಳೇನು ; (ವಿವರ ನೀಡುವುದು)

(ಇ) ಈ ಸಂಬಂಧ ಇದುವರೆವಿಗೂ ಎಷ್ಟು ಸಭೆಗಳನ್ನು ನಡೆಸಲಾಗಿದೆ ; ಈ ಸಭೆಯ ನಡವಳಿಗಳು ಯಾವುವು ;

(ಈ) ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವಲ್ಲಿ ತುಂಬಾ ವಿಳಂಬ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು ?

# ಶಿಕ್ಷಣ ಇಲಾಖೆಗೆ ಅನುದಾನ ಬಿಡುಗಡೆ ಮಾಡಲು ವಿಳಂಬ ಆಗುತ್ತಿರುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೦೨೯ (೩೩೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದಿಂದ ಪ್ರಸ್ತುತ ವರ್ಷ ಶಿಕ್ಷಣ ಇಲಾಖೆಗೆ ಬಿಡುಗಡೆ ಮಾಡುತ್ತಿರುವ ಹಣವೆಷ್ಟು ; (ವಿವರ ಒದಗಿಸುವುದು)

(ಆ) ಈ ಹಣವನ್ನು ವೇತನ ಇನ್ನಿತರೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ ; (ವಿವರ ಒದಗಿಸುವುದು)

(ಇ) ಶಿಕ್ಷಣ ಇಲಾಖೆಗೆ ನಿಗದಿಪಡಿಸಿರುವ ಹಣವನ್ನು ಜಿಲ್ಲಾ ಪಂಚಾಯಿತಿಯಿಂದ ಹಲವು ಹಂತಗಳ ಮೂಲಕ ಬಿಡುಗಡೆಯಾಗುತ್ತಿರುವುದರಿಂದ ಹಣ ಬಿಡುಗಡೆಯಾಗಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಪಂಚಾಯಿತಿಯನ್ನು ಬಿಟ್ಟು ನೇರವಾಗಿ ಶಿಕ್ಷಣ ಇಲಾಖೆಗೆ ಹಣ ಬಿಡುಗಡೆ ಮಾಡಲು ಇರುವ ಸಮಸ್ಯೆಗಳೇನು ?

## ಪಿ.ಡಿ.ಓ.ಗಳ ನೇಮಕಾತಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೩೦ (೩೪೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಲಿ ಇರುವ ಪಿ.ಡಿ.ಓ.ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪಿ.ಡಿ.ಓ. ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಯಾವಾಗ ಪೂರ್ಣಗೊಳ್ಳಲಿದೆ ;

(ಇ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಪಿ.ಡಿ.ಓ. ಗಳು ಸರಿಯಾಗಿ ಕರ್ತವ್ಯಕ್ಕೆ ಹಾಜರಾಗದೆ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ವಸತಿ ಯೋಜನೆಯಡಿಯಲ್ಲಿ ಮನೆಗಳ ನಿರ್ಮಾಣ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೩೧ (೩೪೯೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಸವಶ್ರೀ ವಸತಿ ಹಾಗೂ ಇಂದಿರಾ ಅವಾಸ್ ವಸತಿ ಯೋಜನೆಯ ಮನೆಗಳನ್ನು ಇಷ್ಟೇ ಅಳತೆಯಲ್ಲಿ ನಿರ್ಮಿಸಬೇಕೆಂಬ ನಿರ್ಬಂಧ ವಿಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಮನೆಯ ನಿರ್ಮಾಣದ ಅಳತೆಯಲ್ಲಿ ಹೆಚ್ಚು ಕಡಿಮೆ ಆದಲ್ಲಿ ಸಹಾಯಧನವನ್ನು ಮಂಜೂರು ಮಾಡದೇ ಇರುವುದು ಸಮಂಜಸವೇ ; ಈ ನಿರ್ಬಂಧವನ್ನು ಬದಲಾವಣೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಕಳೆದ ೨ ವರ್ಷಗಳ ಅವಧಿಯಲ್ಲಿ ಸದರಿ ಯೋಜನೆಗಳಲ್ಲಿ ನಿರ್ಮಿಸಿರುವ ಮತ್ತು ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ? (ಬೆಳಗಾವಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

## ರೋಗಗ್ರಸ್ತ ಕೈಗಾರಿಕೆಗಳ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೩೦೩೨ (೩೪೯೪) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರೋಗಗ್ರಸ್ತ ಕೈಗಾರಿಕಾ Unit ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕೈಗಾರಿಕೆವಾರು ವಿವರ ಒದಗಿಸುವುದು)

(ಆ) ರೋಗಗ್ರಸ್ತವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಕೈಗಾರಿಕಾ ಭೂಮಿ ಬೆಲೆ ಹೊರತು ಪಡಿಸಿ ಕೈಗಾರಿಕೆ ಲಾಭದಾಯಿಕವಾಗುತ್ತಿರುವ ಉದ್ದಿಮೆಗಳು ಯಾವುವು ;

(ಈ) ರೋಗಗ್ರಸ್ತ ಉದ್ದಿಮೆಗಳನ್ನು ಈ ಪಟ್ಟಿಯಿಂದ ಹೊರತರಲು ಸರ್ಕಾರದ ಪ್ರಯತ್ನಗಳೇನು ?

## ಆಶ್ರಯ, ಅಂಬೇಡ್ಕರ್ ಹಾಗೂ ಬಸವ ವಸತಿ ಯೋಜನೆಯಡಿ ಮನೆಗಳ ನಿರ್ಮಾಣದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೩ (೩೬೯೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಆಶ್ರಯ, ಅಂಬೇಡ್ಕರ್ ಹಾಗೂ ಬಸವ ವಸತಿ ಯೋಜನೆಗಳಡಿಯಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದುವರೆಗೂ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ಫಲಾನುಭವಿಗಳಿಗೆ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ?

## ಶಿಕ್ಷಕರ ವರ್ಗಾವಣೆ ಮಾರ್ಗಸೂಚಿಯಲ್ಲಿ ಕೆಲವು ನ್ಯೂನತೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೪ (೩೪೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಶಿಕ್ಷಕರ ವರ್ಗಾವಣೆ ಮಾರ್ಗಸೂಚಿಯಲ್ಲಿ ಕೆಲವು ತಿದ್ದುಪಡಿ ಮಾಡಿದ್ದರೂ ಕೆಲವು ನ್ಯೂನತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಏನು ಕ್ರಮ ಕೈಗೊಂಡಿದೆ ;

(ಆ) ಈ ವರ್ಗಾವಣೆ ಮಾರ್ಗಸೂಚಿಯಲ್ಲಿ ವಿಶೇಷ ಶಿಕ್ಷಕರು (ಸಂಗೀತಾ, ಚಿತ್ರಕಲೆ ಮತ್ತು ಭೌತಿಕ ಶಿಕ್ಷಕರು)ಗಳಿಗೆ ಶೇಕಡವಾರು ಎಷ್ಟು ನಿಗದಿಗೊಳಿಸಲಾಗಿದೆ ;

(ಇ) ಹಾಲಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಶಿಕ್ಷಕರು (ಸಂಗೀತಾ, ಚಿತ್ರಕಲೆ ಮತ್ತು ದೈಹಿಕ ಶಿಕ್ಷಕರು)ಗಳ ಸಂಖ್ಯೆ ಎಷ್ಟು ? (ಪ್ರತ್ಯೇಕವಾಗಿ ಜಿಲ್ಲಾವಾರು ವಿವರ ನೀಡುವುದು)

## ಗ್ರಾಮ ವಿಕಾಸ ಯೋಜನೆಯ ಅಭಿವೃದ್ಧಿ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೫ (೩೭೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಗ್ರಾಮಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಆ) ಗ್ರಾಮ ವಿಕಾಸ ಯೋಜನೆಯಲ್ಲಿ ಯುವಕ–ಯುವತಿಯರಿಗೆ ಯಾವ ಯಾವ ಬಗೆಯ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗಿದೆ ;

(ಇ) ತರಬೇತಿ ಪಡೆದವರಿಗೆ ನೆರವು ನೀಡುವ ಉದ್ದೇಶದಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಒಕ್ಕೂಟಗಳನ್ನು ಸ್ಥಾಪಿಸಲಾಗಿದೆಯೇ ? (ವಿವರ ನೀಡುವುದು)

## ವಸತಿ ಯೋಜನೆಯಿಂದ ನಿರ್ಮಾಣಗೊಂಡ ಮನೆಗಳ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೬ (೩೭೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ವಸತಿ ಯೋಜನೆಗಾಗಿ ಬಿಡುಗಡೆ ಮಾಡಿದ ಹಣವೆಷ್ಟು ; ಇದರಲ್ಲಿ ವಸತಿ ನಿರ್ಮಾಣಕ್ಕಾಗಿ ಬಿಡುಗಡೆಯಾದ ಹಣವೆಷ್ಟು ; ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ನಿರ್ಮಾಣ ಮಾಡಿದ ಮನೆಗಳು ಹಾಗೂ ಜಿಲ್ಲಾವಾರು ಬಿಡುಗಡೆ ಮಾಡಿದ ಹಣದ ವಿವರವನ್ನು ನೀಡುವುದು)

(ಆ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ವಸತಿ ಯೋಜನೆಗಾಗಿ ಹಾಗೂ ಕೊಳಚೆ ಅಭಿವೃದ್ಧಿ ಮಂಡಳಿಗೆ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ?

# ಬಸವ ವಸತಿ ಯೋಜನೆಯ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೭ (೩೪೯೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನ ಬಸವ ವಸತಿ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸಲು ಗುರಿ ಹೊಂದಲಾಗಿದೆ ; (ತಾಲ್ಲೂಕುವಾರು ಅಂಕಿ–ಅಂಶ ನೀಡುವುದು)

(ಆ) ನಾಗಮಂಗಲ ತಾಲ್ಲೂಕಿಗೆ ನಿಗಧಿಪಡಿಸಿರುವ ಗುರಿ ಎಷ್ಟು ; ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯಿತಿಗಳಿಗೆ ಎಷ್ಟೆಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಫಲಾನಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡುವಾಗ ಇರುವ ಸರ್ಕಾರಿ ಮಾನದಂಡಗಳೇನು ;

(ಈ) ನಾಗಮಂಗಲ ತಾಲ್ಲೂಕಿನಲ್ಲಿ ಭೀಮನಹಳ್ಳಿ ಗ್ರಾಮ ಪಂಚಾಯಿತಿ ಸೇರಿದಂತೆ ಹಲವಾರು ಗ್ರಾಮ ಪಂಚಾಯಿತಿಗಳ ಯೋಜನೆಗಳಿಗೆ ಸಂಬಂಧಿಸಿದ ಅಧಿಕೃತ ಗ್ರಾಮ ಸಭೆಗಳ ಆಯ್ಕೆ ಪಟ್ಟಿಗಳನ್ನು ಹೊರತುಪಡಿಸಿ ಆಯ್ಕೆಗೊಳ್ಳದ ಇತರೆ ಫಲಾನುಭವಿಗಳ ಹೆಸರುಗಳನ್ನು ಖಾಸಗಿಯಾಗಿ ಪಡೆದು ಫಲಾನುಭವಿಗಳನ್ನಾಗಿ ಆಯ್ಕೆ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿಗಳ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವ ವಿಚಾರ ಎಷ್ಟು ಸರಿ ; ಇದಕ್ಕೆ ಸರ್ಕಾರದ ಕ್ರಮವೇನು ?

## ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಶೌಚಾಲಯ ನಿರ್ಮಾಣಗಳ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೮ (೩೭೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಚ್ಛ ಭಾರತ್ ಮಿಷನ್ (ಎಸ್‌ಬಿಎಂ) ಯೋಜನೆಯಡಿಯಲ್ಲಿ ರಾಜ್ಯದಲ್ಲಿ ನಿರ್ಮಾಣ ಮಾಡಿದ ಶೌಚಾಲಯಗಳು ಎಷ್ಟು ; ನಿರ್ಮಾಣ ಮಾಡಿದ ಶೌಚಾಲಯಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ; ಯಾವಾಗ ಬಿಡುಗಡೆ ಮಾಡಲಾಯಿತು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿ ಶೌಚಾಲಯಕ್ಕೆ ನಿಗಧಿ ಮಾಡಿರುವ ಹಣವೆಷ್ಟು ; ಇದಕ್ಕೆ ಸರ್ಕಾರದಿಂದ ನೀಡುವ ಪ್ರೋತ್ಸಾಹ ಧನವೆಷ್ಟು ; ಕೇಂದ್ರ ಸರ್ಕಾರದಿಂದ ಸದರಿ ಯೋಜನೆಗೆ ಬಿಡುಗಡೆ ಮಾಡಿರುವ ಹಣವೆಷ್ಟು ;

(ಇ) ಗ್ರಾಮೀಣಾಭಿವೃದ್ಧಿ ಇಲಾಖೆ ಮುಖಾಂತರ ಕೈಗೊಳ್ಳುವ ವಿವಿಧ ಯೋಜನೆಗಳಿಗೆ ೨೦೧೩–೧೪ ಹಾಗೂ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿದ ಹಣವೆಷ್ಟು ; ಇದರಲ್ಲಿ ರಾಜ್ಯ ಸರ್ಕಾರ ಯೋಜಿಸಿರುವ ಯೋಜನೆಗಳಿಗೆ ಬಿಡುಗಡೆ ಮಾಡಿರುವ ಹಣವೆಷ್ಟು ?

## ಸ್ವಸಹಾಯ ಸಂಘಗಳ ಸ್ವತ್ತು ನಿಧಿ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೯ (೩೫೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ ರಿಂದ ಇಲ್ಲಿಯವರೆಗೆ ಮಂಡ್ಯ ಜಿಲ್ಲೆಗೆ ಯೋಜನಾ ವಿಭಾಗದಿಂದ ರಸ್ತೆ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಆ) ಮಂಡ್ಯ ಜಿಲ್ಲೆಗೆ "ಜಿಲ್ಲಾ ತರಬೇತಿ ಕೇಂದ್ರ"ದ "ಸ್ವಸಹಾಯ ಸಂಘಗಳ ಸ್ವತ್ತು ನಿಧಿ" ಯಿಂದ ಕಾರ್ಯಕ್ರಮಗಳನ್ನು ಆಯೋಜಿಸಲು ಯಾವ ಯಾವ ಸಂಘ-ಸಂಸ್ಥೆಗಳಿಗೆ ಸಹಕಾರ ನೀಡಿದೆ ?

## ವಿವಿಧ ವಸತಿ ಯೋಜನೆಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೩೦೪೦ (೩೫೬೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾದ ಮನೆಗಳೆಷ್ಟು ; (ವರ್ಷವಾರು, ಯೋಜನೆವಾರು, ಹೋಬಳಿವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಡಿ ನಿರ್ಮಾಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಮನೆಗಳೆಷ್ಟು ; ಅಪೂರ್ಣಗೊಳ್ಳಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹೊಂದಿದೆ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಗ್ರಾಮೀಣ ಕುಡಿಯುವ ನೀರಿನ ಯೋಜನೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೩೦೪೧ (೩೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರ ಪ್ರಾಯೋಜಿತ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆ ಮತ್ತು ರಾಜ್ಯದ ಅನುದಾನದಲ್ಲಿ ಎಷ್ಟು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಲಾಗಿದೆ ; (ವರ್ಷವಾರು ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆ ಮತ್ತು ರಾಜ್ಯದ ಅನುದಾನದಲ್ಲಿ ಕೈಗೊಂಡಿರುವ ಕುಡಿಯುವ ನೀರಿನ ಯೋಜನೆಗಳು ಅಪೂರ್ಣಗೊಳ್ಳಲು ಕಾರಣಗಳೇನು ; ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಸಡಕ್ ಯೋಜನೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೨ (೩೫೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ "ಪ್ರಧಾನ ಮಂತ್ರಿಗಳ "ಗ್ರಾಮ ಸಡಕ್" ಯೋಜನೆಯಡಿ ಕೈಗೊಂಡ ಗ್ರಾಮೀಣ ರಸ್ತೆಗಳೆಷ್ಟು ; (ವರ್ಷವಾರು ವಿಧಾನಸಭಾವಾರು ಮಾಹಿತಿ ನೀಡುವುದು)

(ಆ) ಗ್ರಾಮ ಸಡಕ್ ಯೋಜನೆಗೆ ಕೇಂದ್ರ ಸರ್ಕಾರ ವಿಧಿಸಿರುವ ನೀತಿ ನಿಯಮಗಳೇನು ; ಪ್ರತಿ ಕಿ.ಮೀ.ಗೆ ಖರ್ಚಾಗುವ ಹಣವೆಷ್ಟು ?

## ವಿದೇಶ ನೇರ ಬಂಡವಾಳ ಹೂಡಿಕೆ ನೀತಿಯೊಂದನ್ನು ರೂಪಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೩ (೩೭೨೪) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದೇಶಿ ನೇರ ಬಂಡವಾಳ ಹೂಡಿಕೆ ಬಗ್ಗೆ ರಾಜ್ಯವು ತನ್ನದೇ ಆದ ನೀತಿಯೊಂದನ್ನು ಹೊಂದಿದೆಯೇ ;

(ಆ) ಹೊಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ವಿದೇಶಿ ನೇರ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು ಅನುಮೋದನೆಗಾಗಿ ಸಲ್ಲಿಸಲ್ಪಟ್ಟಿವೆ ;

(ಇ) ಇಲ್ಲಿಯವರೆಗೆ ಉನ್ನತ ಮಟ್ಟದ ಸಮಿತಿಯು ಎಷ್ಟು ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿದೆ ;

(ಈ) ರಾಜ್ಯದಲ್ಲಿ ವೈದ್ಯಕೀಯ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ ;

(ಉ) ರೂಪಿಸಿದ್ದಲ್ಲಿ, ಇಲ್ಲಿಯವರೆಗೆ ಆಗಿರುವ ಪ್ರಗತಿ ಏನು ?

## ಪ್ರವಾಸೋದ್ಯಮ ಟ್ಯಾಕ್ಸಿ ಖರೀದಿಸುವ ಯೋಜನೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೪ (೩೭೨೫) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರುದ್ಯೋಗಿ ಪರಿಶಿಷ್ಟ ಜಾತಿ/ಪಂಗಡ ಹಾಗೂ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಪ್ರವಾಸಿ ಟ್ಯಾಕ್ಸಿ ಖರೀದಿಸುವ ಯೋಜನೆ ರಾಜ್ಯದಲ್ಲಿ ಯಾವಾಗಿನಿಂದ ಜಾರಿಯಲ್ಲಿದೆ ;

(ಆ) ಪ್ರತಿ ಫಲಾನುಭವಿಗೆ ಈ ಯೋಜನೆಯಡಿ ನೀಡಲಾಗುವ ಹಣ ಎಷ್ಟು ;

(ಇ) ೨೦೧೪–೧೫ ಹಾಗೂ ೨೦೧೫–೧೬ ರಲ್ಲಿ ಈ ಯೋಜನೆಯ ಪ್ರಯೋಜನ ಪಡೆದ ಫಲಾನುಭವಿಗಳು ಯಾರು ? (ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡುವುದು)

## ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೫ (೨೪೮೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಅಕ್ರಮ ಮರಳು ಗಣಿಗಾರಿಕೆ ವ್ಯಾಪಕವಾಗಿ ನಡೆಯುತ್ತಿದ್ದು, ಸಾರ್ವಜನಿಕರು ಆಕ್ರೋಶಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದದೆಯೇ ;

(ಆ) ಹಾಗಿದ್ದಲ್ಲಿ, ಅಕ್ರಮ ಮರಳು ಸಾಗಾಣಿಕೆ ತಡೆಗಟ್ಟಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಮರಳಿನ ಬೆಲೆ ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

## ಶೌಚ ಜಾಗೃತಿ ಮೂಡಿಸಿ ನೈರ್ಮಲ್ಯ ಕಾಪಾಡುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೬ (೩೫೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಹೆಚ್ಚಿನ ಗ್ರಾಮಸ್ಥರು ಅದರಲ್ಲಿಯೂ ಮಹಿಳೆಯರು ಇಂದಿಗೂ ಶೌಚಕ್ರಿಯೆಗಾಗಿ ಬಯಲುದಾರಿ ಹಿಡಿಯುತ್ತಿದ್ದು, ಹೆಚ್ಚಿನ ಅನಾರೋಗ್ಯಕರ ವಾತಾವರಣ ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಶೌಚ ಜಾಗೃತಿ ಮೂಡಿಸಿ ನೈರ್ಮಲ್ಯವನ್ನು ಮತ್ತು ಮುಖ್ಯವಾಗಿ ಮಹಿಳೆಯರ ಗೌರವವನ್ನು ಕಾಪಾಡಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;

(ಇ) ವೈಯಕ್ತಿಕ ಗೃಹ ಶೌಚಾಲಯಗಳ ನಿರ್ಮಾಣದಲ್ಲಿ ಮಾಡಲಾದ ಸಾಧನೆ ಏನು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಮಕ್ಕಳ ಪರಿಸರ ಅಭಿವೃದ್ಧಿಗಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ?

## ಲಕ್ಕುಂಡಿಯಲ್ಲಿ ಪ್ರವಾಸಿ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೭ (೩೬೮೨) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರವಾಸಿ ಮೂಲಭೂತ ಸೌಕರ್ಯಗಳ ಕೊರೆತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅರಣ್ಯ ವಸತಿ ಗೃಹಗಳು ಮತ್ತು ವಿಹಾರಧಾಮ ನಿಯಮಿತದ (ಜಂಗಲ್‌ಲಾಡ್ಜ್ಸ್) ಮೂಲಕ ಕೊಡಚಾದ್ರಿ, ಮೂಕಾಂಬಿಕಾ ಅರಣ್ಯ, ಕಪ್ಪತ್‌ಗುಡ್ಡ, ಗದಗ್, ಬಾಬಾಬುಡನ್‌ಗಿರಿ, ಕ್ಯಾಸಲ್‌ರಾಕ್ ಮುಂತಾದ ಸ್ಥಳಗಳಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲಾಗುವುದೇ ;

(ಇ) ಗದಗ್ ಜಿಲ್ಲೆಯ ಲಕ್ಕುಂಡಿಯಲ್ಲಿ ಪ್ರವಾಸಿ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು ಯಾವಾಗ ?

## ಗ್ರಾಮೀಣ ರಸ್ತೆಗಳ ಸುಧಾರಣೆ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೪೮ (೩೬೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಗ್ರಾಮೀಣ ರಸ್ತೆಗಳು ಹದಗೆಟ್ಟಿದ್ದು, ಗ್ರಾಮಸ್ಥರಿಗೆ ತೀವ್ರ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿನ ಗ್ರಾಮೀಣ ರಸ್ತೆಗಳನ್ನು ಸುಧಾರಿಸಲು ಮತ್ತು ಉನ್ನತೀಕರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಈ ಯೋಜನೆಗಾಗಿ ಒದಗಿಸಲಾಗುವ ಒಟ್ಟು ಹಣವೆಷ್ಟು; ಕೇಂದ್ರ ಸರ್ಕಾರದ ಅನುದಾನವೆಷ್ಟು;

(ಈ) ಎಷ್ಟು ಕಿ.ಮೀ. ರಸ್ತೆಯನ್ನು ಸುಧಾರಣೆ/ಉನ್ನತೀಕರಣ ಮಾಡಲು ಉದ್ದೇಶಿಸಲಾಗಿದೆ ? (ಜಿಲ್ಲಾವಾರು ಹಣದ ಹಂಚಿಕೆಯ ವಿವರಗಳನ್ನು ಒದಗಿಸುವುದು)

## “ಗ್ರಾಮ ಪಂಚಾಯಿತಿ ಮಾದರಿ ಶಾಲೆ” ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೦೪೯ (೩೫೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧ ರಿಂದ ೫ನೇ ತರಗತಿವರೆಗೆ ೨೦ ಮಕ್ಕಳಿಗಿಂತ ಕಡಿಮೆ ಸಂಖ್ಯೆ ಇರುವ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳ ಉಳಿವಿನ ಹಾಗೂ ಮುಂದುವರಿಕೆಯ ಬಗ್ಗೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಇ) ಗ್ರಾಮ ಪಂಚಾಯಿತಿಗೊಂದು ಎಲ್ಲಾ ಸೌಲಭ್ಯಗಳನ್ನು ಹೊಂದಿರುವ “ಗ್ರಾಮ ಪಂಚಾಯಿತಿ ಮಾದರಿ ಶಾಲೆ” ಯೋಜನೆಯನ್ನು ಸರ್ಕಾರ ಅನುಷ್ಠಾನಗೊಳಿಸಿದೆಯೇ ? (ವಿವರ ನೀಡುವುದು)

## ಪಂಚಾಯತ್ ರಾಜ್ ಅಧಿನಿಯಮಕ್ಕೆ ತಿದ್ದುಪಡಿ ತರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೦೫೦ (೩೫೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸದೃಢಗೊಳಿಸಲು ಕೇರಳ ರಾಜ್ಯದಲ್ಲಿರುವಂತೆ (Regulating) ರೆಗ್ಯೂಲೇಟಿಂಗ್ ಸಂಸ್ಥೆಗೆ ನೀಡಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಉದ್ದೇಶಿಸಿದ್ದಲ್ಲಿ, ಹಾಲಿ ಇರುವ ಪಂಚಾಯತ್ ರಾಜ್ ಅಧಿನಿಯಮಕ್ಕೆ ತಿದ್ದುಪಡಿ ತರಲಾಗುವುದೇ ?

## ರಾಜ್ಯದಲ್ಲಿರುವ ಟಿ.ಜಿ.ಟಿ. ಶಿಕ್ಷಕರ ಸಮಸ್ಯೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೦೫೧ (೩೫೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಟಿ.ಜಿ.ಟಿ ಶಿಕ್ಷಕರ ಸಂಖ್ಯೆ ಎಷ್ಟು ; ಅವರಿಗೆ ಯಾವ ವೇತನಶ್ರೇಣಿಯನ್ನು ನೀಡಲಾಗುತ್ತಿದೆ ;

(ಆ) ಅವರನ್ನು ಪ್ರೌಢ ಶಾಲಾ ಶಿಕ್ಷಕರ ಸಮಾನ ಶ್ರೇಣಿ ಹಾಗೂ ಸೇವಾ ಜೇಷ್ಠತೆಯಲ್ಲಿ ವಿಲೀನಗೊಳಿಸಲು ಇರುವ ಸಮಸ್ಯೆಗಳೇನು ;

(ಇ) ಟಿ.ಜಿ.ಟಿ ಶಿಕ್ಷಕರ ವೇತನ ಶ್ರೇಣಿ, ಸೇವಾ ಭದ್ರತೆ, ವರ್ಗಾವಣೆಯ ಅವಕಾಶಗಳು, ಜೇಷ್ಠತೆ ಹಾಗೂ ಇತರ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೦೫೨ (೩೫೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷದ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಹಣವನ್ನು ಖರ್ಚು ಮಾಡದೇ ಬ್ಯಾಂಕಿನಲ್ಲಿ ಠೇವಣಿ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಲ್ಲಿ ಈ ಇಲಾಖೆಯಲ್ಲಿ ವಿವಿಧ ಶೀರ್ಷಿಕೆಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಹಣ ಮತ್ತು ಖರ್ಚು ಮಾಡಲಾದ ಮೊತ್ತವೆಷ್ಟು ; (ಹಣಕಾಸಿನ ವಿವರವನ್ನು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈವರೆಗೆ ದುರುಪಯೋಗವಾಗಿರುವ ಮೊತ್ತವೆಷ್ಟು ; (ವಿವರವನ್ನು ನೀಡುವುದು)

(ಈ) ಹಣವನ್ನು ದುರುಪಯೋಗಪಡಿಸಿಕೊಂಡು ಅನಧಿಕೃತವಾಗಿ ವಿವಿಧ ಬ್ಯಾಂಕುಗಳಲ್ಲಿ ಠೇವಣಿ ಇಡಲು ಅನುಮತಿ ನೀಡಿದ ಅಧಿಕಾರಿಗಳ ಮೇಲೆ ಏನು ಕ್ರಮ ಜರುಗಿಸಲಾಗಿದೆ ?

## ರಾಜ್ಯದಲ್ಲಿ ಶೌಚಾಲಯಗಳ ನಿರ್ಮಾಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೦೫೩ (೩೫೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳ ಅವಧಿಯಲ್ಲಿ ನಿರ್ಮಿಸಲಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೪–೧೫ನೇ ಸಾಲಿನಲ್ಲಿ ಎಷ್ಟು ಶೌಚಾಲಯಗಳ ನಿರ್ಮಾಣಕ್ಕೆ ಗುರಿ ಹಾಕಿಕೊಳ್ಳಲಾಗಿತ್ತು ಮತ್ತು ಗುರಿಯನ್ನು ಸಾಧಿಸಿದ ಅಂಕಿ ಸಂಖ್ಯೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಶೌಚಾಲಯಗಳ ಸ್ವಚ್ಛತೆಗೆ ನೀರಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಇದನ್ನು ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು ;

(ಉ) ಈ ಶೌಚಾಲಯಗಳ ನಿರ್ಮಾಣದಿಂದ ಗ್ರಾಮೀಣ ಪ್ರದೇಶದಲ್ಲಿ ಬದಲಾವಣೆ ತರಲಾಗಿದೆಯೇ ಅಥವಾ ಇನ್ನೂ ಹಳೆಯ ಪದ್ಧತಿಯೇ ಮುಂದುವರಿದಿದೆಯೇ ತಿಳಿಸುವುದು ?

## ಗುತ್ತಿಗೆ ಕರಾರನ್ನು ಉಲ್ಲಂಘಿಸಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೫೪ (೩೫೮೦) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧೀನದಲ್ಲಿರುವ ಮಯೂರ ಬರಿದ್‌ಶಾಹಿ ಹೋಟೆಲ್‌ನ್ನು ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಗುತ್ತಿಗೆ ಕರಾರನ್ನು ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಗುತ್ತಿಗೆದಾರರಿಗೆ ಮೂಲ ಕರಾರು ರದ್ದುಗೊಳಿಸುವ ನೋಟಿಸ್ ನೀಡಿದ್ದು ಯಾವಾಗ ; ನೋಟಿಸ್‌ಗೆ ಸದರಿ ಗುತ್ತಿಗೆದಾರರು ನೀಡಿರುವ ಉತ್ತರವೇನು ;

(ಇ) ಮೂಲ ಕರಾರು ರದ್ದುಗೊಳಿಸಲು ಮತ್ತು ಗುತ್ತಿಗೆ ಉಲ್ಲಂಘನೆ ಪ್ರಕರಣದಡಿ ಗುತ್ತಿಗೆದಾರರಿಗೆ ದಂಡ ವಿಧಿಸುವ ಕುರಿತು ಕೈಗೊಂಡಿರುವ ಕ್ರಮಗಳೇನು ;

(ಈ) ಈಗಾಗಲೇ ಗುತ್ತಿಗೆ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಕಟ್ಟಡಗಳನ್ನು ಕೆಡವಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ; ಹಾಗಿದ್ದಲ್ಲಿ, ಕೆಡವಲಾಗಿರುವ ಕಟ್ಟಡಗಳು ಯಾವುವು ? (ವಿವರ ನೀಡುವುದು)

## ೧೩ನೇ ಹಣಕಾಸು ಯೋಜನೆಯಲ್ಲಿ ನಡೆದಿರುವ ಅವ್ಯವಹಾರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೫೫ (೩೫೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಮುರ್ಕಿ ಗ್ರಾಮ ಪಂಚಾಯಿತಿಯಲ್ಲಿ ೧೩ನೇ ಹಣಕಾಸು ಯೋಜನೆಯಲ್ಲಿ ನಡೆದಿರುವ ಅವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಸಂಬಂಧ ಜಿಲ್ಲಾ ನೋಡಲ್ ಅಧಿಕಾರಿ (ಸ್ವಚ್ಛ ಭಾರತ್ ಮಿಷನ್) ಇವರು ಸಲ್ಲಿಸಿರುವ ಪರಿಶೀಲನಾ ವರದಿಯ ಮೇಲೆ ಕ್ರಮ ಜರುಗಿಸದೇ ಇರುವುದಕ್ಕೆ ಕಾರಣವೇನು ;

(ಇ) ಈ ಗ್ರಾಮ ಪಂಚಾಯತಿಯಲ್ಲಿ ಒಂದೇ ವರ್ಷದಲ್ಲಿ ನಾಲ್ಕು ಪಿ.ಡಿ.ಓ.ಗಳು ಕಾರ್ಯನಿರ್ವಹಿಸಿ, ಕ್ರಿಯಾ ಯೋಜನೆಗೆ ವಿರುದ್ಧವಾಗಿ ಕಾಮಗಾರಿ ನಿರ್ವಹಿಸಿ, ಸರ್ಕಾರಕ್ಕೆ ಲಕ್ಷಾಂತರ ರೂ.ಗಳ ಆರ್ಥಿಕ ನಷ್ಟವುಂಟು ಮಾಡಿರುವವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸಲಾಗುವುದೇ; ನಷ್ಟ ವಸೂಲಾತಿಗೆ ಯಾವ ಕ್ರಮ ಜರುಗಿಸಲಾಗುವುದು ? (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು)

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಅಕ್ರಮ ನಡೆದಿರುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೫೬ (೩೫೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಾವಿರ ಕೋಟಿ ಮೊತ್ತದ ಅಕ್ರಮ ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಈ ಹಣವು ವೆಚ್ಚವಾಗದೇ, ದಾಖಲೆಗಳು ಲಭ್ಯವಾಗದೇ, ಲೆಕ್ಕಕ್ಕು ಸಿಗದಿರುವ ದೊಡ್ಡ ಅಕ್ರಮವೆಂಬುದು ನಿಜವೇ ;

(ಇ) ಯಾವಾಗಿನಿಂದ ಈ ಅಕ್ರಮಗಳು ಜರುಗಿವೆ ; ಇದಕ್ಕೆ ಕಾರಣರಾದವರು ಯಾರು ; ಇವರುಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಈ ಹಣ ವಸೂಲಿಗೆ ಸರ್ಕಾರ ಮುಂದಾಗುವುದೇ ; ಇಂತಹ ಅಕ್ರಮಗಳ ತಡೆಗೆ ಸರ್ಕಾರ ಯಾವ ಕ್ರಮ ಜರುಗಿಸುವುದು ?

## ಕೊಳಗೇರಿ ಪ್ರದೇಶದ ಅಭಿವೃದ್ಧಿ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೫೭ (೩೫೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೆ ಯಾವ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಆ) ಬೀದರ್ ನಗರಸಭಾ ವ್ಯಾಪ್ತಿಯಲ್ಲಿ ಬರುವ ವಾರ್ಡ್‌ಗಳಲ್ಲಿರುವ ಕೊಳಗೇರಿಗಳಲ್ಲಿ ವಾಸವಾಗಿರುವ ಜನಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಕೊಳಗೇರಿ ಪ್ರದೇಶಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳೇನು ;

(ಈ) ಕೊಳಗೇರಿ ಪ್ರದೇಶಗಳಲ್ಲಿ ಈವರೆಗೂ ಎಷ್ಟು ಸಾರ್ವಜನಿಕ ಶೌಚಾಲಯಗಳನ್ನು ಹಾಗೂ ಅಂಗನವಾಡಿ ಕೇಂದ್ರಗಳನ್ನು ನಿರ್ಮಾಣ ಮಾಡಲಾಗಿದೆ ? (ವರ್ಷವಾರು ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಾರ್ವಜನಿಕ ಸ್ಮಶಾನಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೮ (೩೬೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಸಾರ್ವಜನಿಕ ಸ್ಮಶಾನಗಳನ್ನು ನಿರ್ಮಿಸಲು ಸ್ಥಳ ಮಂಜೂರಾತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸಾರ್ವಜನಿಕ ಸ್ಮಶಾನಗಳನ್ನು ನಿರ್ಮಿಸಲು ಸೌಲಭ್ಯ ಕೋರಿದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು, ಅವು ಯಾವುವು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸಾರ್ವಜನಿಕ ಸ್ಮಶಾನಗಳನ್ನು ಸೌಲಭ್ಯಗಳನ್ನು ಕೋರಿದ ಗ್ರಾಮ ಪಂಚಾಯತ್‌ಗಳಿಗೆ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇಲ್ಲವಾದಲ್ಲಿ ಕಾರಣವೇನು ? (ಜಿಲ್ಲಾವಾರು ಗ್ರಾಮಪಂಚಾಯತಿವಾರು ವಿವರ ನೀಡುವುದು)

## ರಾಜ್ಯದಲ್ಲಿನ ಪ್ರವಾಸಿ ತಾಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೯ (೩೬೫೫) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರವಾಸಿ ತಾಣಗಳು ಎಷ್ಟು ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅವುಗಳ ಅಭಿವೃದ್ಧಿಗಾಗಿ ಸರ್ಕಾರ ವೆಚ್ಚ ಮಾಡಿದ ಮೊತ್ತವೆಷ್ಟು ; ಕೈಗೊಂಡ ಅಭಿವೃದ್ಧಿ ಕಾರ್ಯಗಳೇನು ; (ವರ್ಷವಾರು ಪ್ರವಾಸಿ ತಾಣವಾರು ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಅಭಿವೃದ್ಧಿ ಹೊಂದದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸರ್ಕಾರದ ಮುಂದಿರುವ ಯೋಜನೆಗಳೇನು ; ಇಲ್ಲವಾದಲ್ಲಿ ಕಾರಣವೇನು ;

(ಈ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಕೋಟಾದಡಿ ಮದ್ಯ ಮಾರಾಟದ ಬಾರ್ ಮತ್ತು ರೆಸ್ಟೋರೆಂಟ್‌ಗಳಿಗೆ ಪರವಾನೆಗೆ ಪಡೆದ ಸನ್ನದುದಾರರ ಸಂಖ್ಯೆ ಎಷ್ಟು ಮತ್ತು ಯಾವುವು ? (ಜಿಲ್ಲಾವಾರು, ಸನ್ನದುದಾರರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

## ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಗೆ ಮತ್ತು ಭೂ ವಿಜ್ಞಾನ ಇಲಾಖೆ ಮಾಹಿತಿ ಹಕ್ಕಿನಡಿ ಬಂದ ಅರ್ಜಿಗಳ ವಿವರ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೦ (೩೬೫೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಮಾಹಿತಿ ಹಕ್ಕಿನಡಿ ಮಾಹಿತಿಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಅರ್ಜಿದಾರರ ಹೆಸರು, ವಿಳಾಸ ಕೋರಿರುವ ಮಾಹಿತಿವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಮಾಹಿತಿಹಕ್ಕಿನಡಿ ಅರ್ಜಿ ಸಲ್ಲಿಸಿ ಹಣಪಾವತಿಸಿದವರ ಸಂಖ್ಯೆ ಎಷ್ಟು ; ಅವರು ಪಾವತಿಸಿದ ಮೊತ್ತವೆಷ್ಟು ; (ಅರ್ಜಿದಾರರ ಹೆಸರು, ವಿಳಾಸ, ಕೋರಿರುವ ಮಾಹಿತಿಯೊಂದಿಗೆ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಮಾಹಿತಿ ಹಕ್ಕಿನಡಿ ಅರ್ಜಿ ಸಲ್ಲಿಸಿ ಹಾಗೂ ಪಾವತಿಸದೇ ಮಾಹಿತಿ ಪಡೆಯದವರ ಸಂಖ್ಯೆ ಎಷ್ಟು ? (ಅರ್ಜಿದಾರರ ಹೆಸರು, ವಿಳಾಸ, ಕೋರಿರುವ ಮಾಹಿತಿಯೊಂದಿಗೆ ವಿವರ ನೀಡುವುದು)

## ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ತ್ಯಾಜ್ಯ ಸಮಸ್ಯೆಗಳ ಪರಿಹಾರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೧ (೩೬೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶಗಳು ತೀವ್ರಗತಿಯಲ್ಲಿ ನಾಗರೀಕರಣಗೊಳ್ಳುತ್ತಿರುವುದರಿಂದ ಸ್ಥಳೀಯವಾಗಿ ತ್ಯಾಜ್ಯದ ಸಮಸ್ಯೆಗಳು ಉಲ್ಬಣಗೊಳ್ಳುತ್ತಿದ್ದು ಸೂಕ್ತ ವಿಲೇವಾರಿ ಇಲ್ಲದೆ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲವಾದಲ್ಲಿ ಕಾರಣವೇನು ;

(ಆ) ಪ್ರಾರಂಭಿಕ ಹಂತದಲ್ಲಿಯೇ ಅಗತ್ಯ ವ್ಯವಸ್ಥೆ ಕಲ್ಪಿಸುವುದರೊಂದಿಗೆ ವೈಜ್ಞಾನಿಕವಾಗಿ ತ್ಯಾಜ್ಯ ನಿರ್ವಹಣೆಯನ್ನು ಮಾಡಿದ್ದಲ್ಲಿ, ಮುಂದೆ ಉದ್ಭವಿಸಬಹುದಾದ ಸಮಸ್ಯೆಗಳನ್ನು ತಡೆಗಟ್ಟಲು ಸಾಧ್ಯವೆಂಬುದನ್ನು ಸರ್ಕಾರ ಮನಗಂಡಿದೆಯೇ ; ಮನಗಂಡಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತ್‌ಗಳಲ್ಲಿ ಸೂಕ್ತ ಸ್ಥಳಾವಕಾಶ ಲಭ್ಯವಿಲ್ಲದಿರುವುದು ಹಾಗೂ ತ್ಯಾಜ್ಯಗಳ ವೈಜ್ಞಾನಿಕ ನಿರ್ವಹಣೆಗೆ ಸಂಪನ್ಮೂಲಗಳ ಕೊರತೆ ಇರುವುದರಿಂದ ತ್ಯಾಜ್ಯದ ಸಮಸ್ಯೆ ಹೆಚ್ಚುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಗಮನಿಸಿದ್ದಲ್ಲಿ, ತ್ಯಾಜ್ಯ ವಿಲೇವಾರಿಗಾಗಿ ಅಗತ್ಯ ಜಮೀನುಗಳನ್ನು ಗ್ರಾಮ ಪಂಚಾಯತ್‌ಗಳಿಗೆ ಹಸ್ತಾಂತರಿಸಿ ವೈಜ್ಞಾನಿಕ ನಿರ್ವಹಣೆಗಾಗಿ ಸೂಕ್ತ ಯೋಜನೆಯಡಿ ಅನುದಾನದ ಮಂಜೂರಾತಿಯನ್ನು ಸರ್ಕಾರವು ನೀಡಲಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ? (ಈಗಾಗಲೇ ಅನುದಾನದ ಮಂಜೂರಾತಿ ನೀಡಿದ್ದಲ್ಲಿ ಅದರ ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕದ ರೈಲ್ವೆ ಯೋಜನೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೨ (೩೬೬೦) ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕೈಗೆತ್ತಿಕೊಳ್ಳಲಾಗಿರುವ ರೈಲ್ವೆ ಯೋಜನೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಎಷ್ಟು ಯೋಜನೆಗಳನ್ನು ಕರ್ನಾಟಕ ಸರ್ಕಾರದ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳ ಒಟ್ಟು ಮೊತ್ತ ಎಷ್ಟು ; ಈಗಾಗಲೇ ಖರ್ಚಾಗಿರುವ ಮೊತ್ತ ಎಷ್ಟು ; ಇದರಲ್ಲಿ ಕರ್ನಾಟಕ ಸರ್ಕಾರದ ಪಾಲು ಎಷ್ಟು ; (ಸಮಗ್ರ ಮಾಹಿತಿ ನೀಡುವುದು)

(ಈ) ಕರ್ನಾಟಕ ಸರ್ಕಾರದಿಂದ ಬಿಡುಗಡೆಯಾಗಬೇಕಾಗಿರುವ ಅನುದಾನ ಎಷ್ಟು ? (ಯೋಜನೆವಾರು ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೩ (೩೬೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತವಾಗಿ ಪರಿಹರಿಸುವುದಕ್ಕಾಗಿ ಹೈದರಾಬಾದ್–ಕರ್ನಾಟಕದ ಆರು ಜಿಲ್ಲೆಗಳಲ್ಲಿ ಇದುವರೆಗೂ ಎಷ್ಟು ಮಲ್ಟಿ ವಿಲೇಜ್ ಸ್ಕೀಮ್‌ಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದುವರೆಗೂ ಪೂರ್ಣಗೊಂಡಿರುವ ಯೋಜನೆಗಳೆಷ್ಟು ; ಇನ್ನೂ ಪೂರ್ಣಗೊಳ್ಳಬೇಕಾಗಿರುವ ಯೋಜನೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಪ್ರದೇಶಗಳಲ್ಲಿ ಕೈಗೆತ್ತಿಕೊಂಡಿರುವ ಕೆಲವು ಯೋಜನೆಗಳು ಪೂರ್ಣಗೊಂಡರೂ ಜನರಿಗೆ ನೀರು ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕಲಬುರಗಿ ಕಂದಾಯ ವಿಭಾಗದ ಆರು ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕಾ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೪ (೩೬೬೧) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಕಂದಾಯ ವಿಭಾಗದ ಆರು ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಬೇಕಾಗಿರುವ ಸಬ್ಸಿಡಿ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಉಳಿದಿರುವ ಸಬ್ಸಿಡಿ ಮೊತ್ತ ಬಿಡುಗಡೆ ಮಾಡಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಮಂಡಳಿಯಲ್ಲಿ ನರ್ಮ್ ಯೋಜನೆ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೫ (೩೬೬೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ಮಂಡಳಿಯಲ್ಲಿ ನರ್ಮ್ ಯೋಜನೆಯಡಿ ಮಂಜೂರಾಗಿರುವ ಯೋಜನೆಗಳು ಯಾವುವು ; (ಯೋಜನಾವಾರು ಅಂದಾಜು ಮೊತ್ತ ಬಿಡುಗಡೆಯಾದ ಮೊತ್ತ, ಖರ್ಚಾಗಿರುವ ಮೊತ್ತದ ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದ ಮಾರ್ಗ ಸೂಚಿಯಂತೆ ಸಾಮಾಜಿಕ ಅರಿವು ಮೂಡಿಸುವ ಐ.ಇ.ಸಿ. ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಯಾವ ಯಾವ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಅನುಮೋದನೆಯಾಗಿದೆ ; ಇದುವರೆಗೂ ಅನುಷ್ಠಾನಗೊಂಡಿರುವ ಹಾಗೂ ಅನುಷ್ಠಾನಗೊಳ್ಳದೇ ಇರುವ ಐ.ಇ.ಸಿ. ಕಾರ್ಯಕ್ರಮಗಳು ಯಾವುವು ;

(ಇ) ಮಂಡಳಿಗೆ ಮಂಜೂರಾಗಿರುವ ಐ.ಇ.ಸಿ. ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್‌ನಲ್ಲಿ ಭಾಗವಹಿಸಿರುವ ಸಂಸ್ಥೆಗಳು ಎಷ್ಟು ; ಇವರಿಂದ ಜಮಾ ಮಾಡಿಕೊಂಡಿರುವ ಇ.ಎಂ.ಡಿ. ಮೊತ್ತ ಎಷ್ಟು ? (ಸಂಸ್ಥೆವಾರು ವಿವರ ನೀಡುವುದು)

# ಹೈದರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬೬ (೩೬೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯತಿಗಳಿರುತ್ತವೆ ಹಾಗೂ ಹೊಸದಾಗಿ ಸೃಷ್ಟಿಸಲಾಗಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ;

(ಆ) ಈ ಭಾಗದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿ ಬರುವ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; (ಹೊಸ ಗ್ರಾಮ ಪಂಚಾಯತಿಗಳಲ್ಲಿನ ಹುದ್ದೆಗಳು ಸೇರಿದಂತೆ ವೃಂದವಾರು ವಿವರ ನೀಡುವುದು)

(ಇ) ಹೊಸ ಗ್ರಾಮ ಪಂಚಾಯತಿಗಳಲ್ಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಕಲಬುರಗಿ, ಬೀದರ್, ಯಾದಗಿರಿ, ಬಳ್ಳಾರಿ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಪಿ.ಡಿ.ಓ. ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಕಾರ್ಯದರ್ಶಿ ಗ್ರೇಡ್–೧, ಗ್ರೇಡ್–೨ ಹುದ್ದೆಗಳು ಖಾಲಿಯಿರುತ್ತವೆ ; (ವಿವರ ನೀಡುವುದು)

(ಉ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಅಭಿವೃದ್ಧಿ ಕಾರ್ಯಗಳು ನಿಧಾನಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಎಷ್ಟು ದಿನಗಳಲ್ಲಿ ಭರ್ತಿ ಮಾಡಲಾಗುವುದು ?

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವರ್ಷಂ ಪ್ರತಿ ತರಬೇತಿಯ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೦೬೭ (೩೬೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಪ್ರತಿ ವರ್ಷ ತರಬೇತಿ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಆ) ಅನುದಾನಿತ/ಅನುದಾನರಹಿತ ಕಾಲೇಜುಗಳ ಉಪನ್ಯಾಸಕರಿಗೆ ಈ ತರಬೇತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಈ ತಾರತಮ್ಯ ಏಕೆ ; ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೦೬೮ (೩೬೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಸಹ ಶಿಕ್ಷಕರಿಂದ ಉಪನ್ಯಾಸಕರಾಗಿ ಬಡ್ತಿ ನೀಡಲು ಮೀಸಲಿಟ್ಟ ಶೇಕಡ ಪ್ರಮಾಣ ಹಾಗೂ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ವಿವರ ನೀಡುವುದು)

(ಇ) ಕಳೆದ ೪ ವರ್ಷಗಳಿಂದ ಈ ಹುದ್ದೆಗಳಿಗೆ ಬಡ್ತಿ ನೀಡದಿರಲು ಕಾರಣ ಏನು ?

## ರಾಜ್ಯದಲ್ಲಿ ಮಹಿಳಾ ಶೌಚಾಲಯಗಳ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೦೬೯ (೩೬೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶೌಚಾಲಯ (ಮಹಿಳೆಯರ ಶೌಚಾಲಯ ಸೇರಿ)ಗಳು ಇಲ್ಲದೇ ಇರುವ ಶಾಲಾ–ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರಗಳನ್ನು ತಾಲ್ಲೂಕುವಾರು/ಜಿಲ್ಲಾವಾರು ನೀಡುವುದು)

(ಆ) ಈ ಸಂಬಂಧ ಶೌಚಾಲಯವನ್ನು ಕಡ್ಡಾಯಗೊಳಿಸುವಂತೆ ಸರ್ವೋಚ್ಚ ನ್ಯಾಯಾಲಯ ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಈ ಆದೇಶವನ್ನು ಕಡ್ಡಾಯವಾಗಿ ಪಾಲಿಸದೇ ಇರುವುದಕ್ಕೆ ಕಾರಣಗಳು ಏನು ? (ಸರ್ವೋಚ್ಚ ನ್ಯಾಯಾಲಯದ ಆದೇಶದ ಪ್ರತಿ ನೀಡುವುದು)

## ಕ್ಷೇತ್ರ ಶಿಕ್ಷಣಾಧಿಕಾರಿಗಳ ತತ್ಸಮಾನ ಹುದ್ದೆಗಳ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೦೭೦ (೩೬೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತತ್ಸಮಾನ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಈ ಹುದ್ದೆಗಳಿಗೆ ಮುಖ್ಯೋಪಾಧ್ಯಾಯರಿಂದ ಬಡ್ತಿ ನೀಡಲು ಇರುವ ಮಾನದಂಡಗಳು ಹಾಗೂ ಶೇಕಡ ಪ್ರಮಾಣ ಎಷ್ಟು ;

(ಇ) ಹಾಲಿ ಕೆಲಸ ನಿರ್ವಹಿಸುತ್ತಿರುವ ಈ ವೃಂದದ ಅಧಿಕಾರಿಗಳಲ್ಲಿ ನಿಯಮ–೩೨ರ ಅಡಿಯಲ್ಲಿರುವವರ ಸಂಖ್ಯೆ ಎಷ್ಟು ;

(ಈ) ಮೇಲ್ಕಂಡ ವೃಂದದಲ್ಲಿ ಖಾಲಿ ಹುದ್ದೆಗಳು ಇದ್ದರೂ ಬಡ್ತಿ ನೀಡಲು ವಿಳಂಬವಾಗಲು ಕಾರಣ ಏನು ;

(ಉ) ಯಾವ ಕಾಲಮಿತಿಯೊಳಗೆ ಅರ್ಹರಿರುವ ಮುಖ್ಯೋಪಾಧ್ಯಾಯರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ತತ್ಸಮಾನ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು ?

## ನೂತನವಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೭೧ (೩೬೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಇತ್ತೀಚೆಗೆ ನೂತನವಾಗಿ ಗ್ರಾಮ ಪಂಚಾಯಿತಿಗಳನ್ನು ರಚನೆ ಮಾಡಿದ್ದು, ಈವರೆಗೂ ಹೊಸದಾಗಿ ರಚನೆಗೊಂಡಂತಹ ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆಯಾಗದೇ ಗ್ರಾಮ ಪಂಚಾಯಿತಿಯ ಆಡಳಿತಕ್ಕೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲ್ಲಿಯವರೆಗೂ ಅನುದಾನ ಬಿಡುಗಡೆಯಾಗದಿರಲು ಕಾರಣವೇನು ; ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತ್ ಸದಸ್ಯರಿಗೆ, ಅಧ್ಯಕ್ಷರಿಗೆ ಗೌರವಧನ ಬಿಡುಗಡೆ ಬಗ್ಗೆ.

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೭೨ (೩೬೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ನೂತನವಾಗಿ ಚುನಾಯಿತರಾದ ಗ್ರಾಮ ಪಂಚಾಯಿತಿಯ ಸದಸ್ಯರು ಹಾಗೂ ಹೊಸದಾಗಿ ಆಯ್ಕೆಯಾದಂತಹ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಸದಸ್ಯರಿಗೆ ಸರ್ಕಾರದಿಂದ ನಿಗಧಿಪಡಿಸಿದ ಗೌರವಧನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲ್ಲಿಯುವರೆಗೂ ಸದಸ್ಯರ ಗೌರವಧನ ಬಿಡುಗಡೆಯಾಗದಿರಲು ಕಾರಣವೇನು ; ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಮೈಸೂರು ಪೇಪರ್ ಮಿಲ್ಸ್‌ನ ಕಾರ್ಮಿಕರಿಗೆ ವೇತನ ಪಾವತಿಸದೇ ಇರುವ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭೩ (೩೬೯೪) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಪೇಪರ್ ಮಿಲ್ಸ್‌ನ ನೌಕರರು/ ಕಾರ್ಮಿಕರಿಗೆ ಕಳೆದ ೩–೪ ತಿಂಗಳಿನಿಂದ ವೇತನ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಈ ವಿಚಾರದಲ್ಲಿ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮೈಸೂರು ಪೇಪರ್ ಮಿಲ್ಸ್‌ನ ವ್ಯವಸ್ಥಾಪಕ ನಿರ್ದೇಶಕ (M.D) ಕಾರ್ಯವ್ಯಾಪ್ತಿ ಮತ್ತು ಅವರಿಗೆ ನೀಡಿರುವ ಅಧಿಕಾರಗಳೇನು ; (ವಿವರ ನೀಡುವುದು)

## ಸಾರ್ವಜನಿಕ ಗ್ರಂಥಾಲಯಗಳಿಗೆ ಪುಸ್ತಕಗಳ ಖರೀದಿ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭೪ (೩೬೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕ ಗ್ರಂಥಾಲಯಗಳಿಗೆ ಪುಸ್ತಕಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುತ್ತಿರುವ ಮಾನದಂಡಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಗ್ರಂಥಾಲಯಗಳಿಗೆ ಆಯ್ಕೆ ಮಾಡಿ ಖರೀದಿಸಿದ ಪುಸ್ತಕಗಳ ಲೇಖಕರ ಹೆಸರು, ಪುಸ್ತಕದ ಹೆಸರು ಹಾಗೂ ದರದೊಂದಿಗೆ ವಿವರ ನೀಡುವುದು ;

(ಇ) ಇದುವರೆವಿಗೂ ರಾಜ್ಯದಲ್ಲಿ ಅಧಿಕೃತವಾಗಿ ನೋಂದಣಿಯಾದ ಪುಸ್ತಕಗಳ ಪ್ರಕಾಶಕರ (Publisher's ) ಕಚೇರಿ/ಮನೆಯ ವಿಳಾಸ ಪಟ್ಟಿ ನೀಡುವುದು?

## ಅನುದಾನಿತ ಶಾಲಾ ಶಿಕ್ಷಕರಿಗೂ ಮತ್ತು ಸರ್ಕಾರಿ ಶಾಲಾ ಶಿಕ್ಷಕರಿಗೂ ಇರುವ ವ್ಯತ್ಯಾಸ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೭೫ (೩೬೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲಾ ಶಿಕ್ಷಕರಿಗೂ ಮತ್ತು ಸರ್ಕಾರಿ ಶಾಲಾ ಶಿಕ್ಷಕರಿಗೂ ಇರುವ ವ್ಯತ್ಯಾಸವೇನು ; ಯಾವ ಯಾವ ಸೌಲಭ್ಯಗಳು ಅನುದಾನಿತ ಶಾಲಾ ಶಿಕ್ಷಕರಿಗೆ ಲಭ್ಯವಾಗುವುದಿಲ್ಲ (ವಿವರ ನೀಡುವುದು)

(ಆ) ಅನುದಾನಿತ ಶಾಲೆಗಳ ಮೌಲ್ಯಾಂಕನ ಪರೀಕ್ಷೆಗೆ ರೂ. ೧೫,೦೦೦ನ್ನು ನೀಡಬೇಕೆಂದು ಆದೇಶ ಮಾಡಿರುವುದು ಸರಿಯೇ ; ಸರ್ಕಾರಿ ಶಾಲೆಗೆ ಉಚಿತ ಮಾಡಿದೆಯೇ ; (ವಿವರ ನೀಡುವುದು)

(ಇ) ಈ ಶುಲ್ಕ ವಿನಾಯಿತಿಗೊಳಿಸಬೇಕೆಂದು ಬೇಡಿಕೆಗೆ ಸರ್ಕಾರದ ಪ್ರತಿಕ್ರಿಯೆ ಏನು ;

(ಈ) ಮಂಗಳೂರು ನಗರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನುದಾನಿತ ಶಾಲಾ ಶಿಕ್ಷಕರಿಗೆ ಮನೆ ಬಾಡಿಗೆ ಭತ್ಯೆಯನ್ನು ಶೇಕಡಾ ೨೦ರಂತೆ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು ?

## ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪ್ರೌಢಶಾಲೆಗೆ ಬಡ್ತಿ ಪಡೆದ ಶಿಕ್ಷಕರ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೭೬ (೩೬೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪ್ರೌಢಶಾಲೆಗೆ ಬಡ್ತಿ ಪಡೆದ ಶಿಕ್ಷಕರು ಪ್ರಾಥಮಿಕ ಶಾಲಾ ಶಿಕ್ಷಕರಿಗಿಂತ ಕಡಿಮೆ ವೇತನ ಪಡೆಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ವರ್ಗಾವಣೆಗೆ ಸಂಬಂಧಪಟ್ಟಂತೆ ಅಧಿನಿಯಮ ೨೦೦೭ರ ನಿಯಮ ೩/೨ರಲ್ಲಿ ಸದನದ ಗಮನಕ್ಕೆ ಬಾರದೆ ತಿದ್ದುಪಡಿ ತಂದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಅಧಿನಿಯಮ ೨೦೦೭ರ ಕರ್ನಾಟಕ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ) ನಿಯಮ ನಿಯಂತ್ರಣ ೧೩/೨-೩ ನಿಯಮ ಉಲ್ಲಂಘಿಸಿ ವಿಧೇಯಕ ೩/೨ರಲ್ಲಿರುವ ಎಲ್ಲಾ ವೃಂದಗಳ ಅಂಶವನ್ನು ತೆಗೆದು ಆಯಾಯ ವೃಂದ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಅರ್ಥಶಾಸ್ತ್ರ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿಪೂರ್ವ ಕಾಲೇಜು ಉಪನ್ಯಾಸಕರಾಗಿ ಕಳೆದ ೧೦ ವರ್ಷಗಳಿಂದ ಬಡ್ತಿ ನೀಡದಿರಲು ಕಾರಣವೇನು ? (ವಿವರ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣದಲ್ಲಿ ರನ್‌ವೇ ವಿಸ್ತರಣೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೩೦೭೭ (೩೬೮೪) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರು ವಿಮಾನ ನಿಲ್ದಾಣದಲ್ಲಿ ೧೨ ಸಾವಿರ ಫೀಟ್ ರನ್‌ವೇ ವಿಸ್ತರಣೆಗೆ ಅವಶ್ಯವಿರುವ ಸ್ಥಳವನ್ನು ರಾಜ್ಯ ಸರ್ಕಾರ ಒದಗಿಸಿದೆಯೇ ; (ಈ ಬಗ್ಗೆ ಮಾಹಿತಿ ಒದಗಿಸುವುದು)

(ಆ) ರನ್‌ವೇ ವಿಸ್ತರಣೆಗೆ ಕಾರ್ಯ ಕೈಗೊಳ್ಳದೇ ಇರುವುದರಿಂದ ದೊಡ್ಡ ವಿಮಾನಗಳು ಬಾರದೇ ಅಭಿವೃದ್ಧಿಯಲ್ಲಿ ಹಿಂದುಳಿಯಲು ಕಾರಣವಾಗುತ್ತಿರುವುದನ್ನು ಇಲಾಖೆ ಗಮನಿಸಿದೆಯೇ ;

(ಇ) ಹವಾಮಾನ ವೈಫಲ್ಯ ಉಂಟಾದಾಗ ವಿಮಾನಗಳು ಇಳಿಯಲು ಮತ್ತು ಏರಲು ಅಸಾಧ್ಯವಾಗಿ ಹಿಂತಿರುಗುತ್ತಿರುವುದರ ಬಗ್ಗೆ ಇಲಾಖೆ ಗಮನಿಸಿದೆಯೇ ; ಈ ಸಂದರ್ಭದಲ್ಲಿ ಹೆಚ್ಚುವರಿ ರಕ್ಷಣೆ ಒದಗಿಸಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೇವಲ ಏರೋ ಬ್ರಿಡ್ಜ್ ಇರುವುದರಿಂದ ಪ್ರಯಾಣಿಕರಿಗೆ ಹೆಚ್ಚಿನ ಸೌಲಭ್ಯ ಒದಗಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಉ) ಪ್ರಸ್ತುತ ವಿಮಾನ ನಿಲ್ದಾಣದಲ್ಲಿ ಎಷ್ಟು ವಿಮಾನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ ; ಪಾರ್ಕಿಂಗ್‌ಗೆ ಸ್ಥಳಾವಕಾಶವನ್ನು ವಿಸ್ತರಿಸಲು ಇಲಾಖೆ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ?

## ರಾಜ್ಯದಲ್ಲಿ ನೂತನವಾಗಿ ಕೈಗಾರಿಕೆಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೭೮ (೩೬೮೭) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೂತನವಾಗಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಕೈಗೊಂಡ ಯೋಜನೆಗಳಾವುವು ; ರಾಜ್ಯದ ಕೈಗಾರಿಕಾ ಉದ್ದಿಮೆಗಳ ಮೂಲಭೂತ ಸೌಕರ್ಯ ಒದಗಿಸಲು ಇಲಾಖೆ ಆಸಕ್ತಿ ತೋರಿಸದೇ ಇರುವುದರಿಂದ ಬೇರೆ ರಾಜ್ಯಗಳಿಗೆ ವಲಸೆ ಹೋಗುತ್ತಿರುವ ಬಗ್ಗೆ ಇಲಾಖೆ ಗಮನಹರಿಸಿದೆಯೇ ; (ವಿವರ ನೀಡುವುದು)

(ಆ) ರಾಜ್ಯ ಸರ್ಕಾರದಿಂದ ಎಷ್ಟು ಉದ್ಯೋಗ ಮೇಳವನ್ನು ಸಂಘಟಿಸಲಾಗಿದೆ ; ೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಮಂದಿಗೆ ಉದ್ಯೋಗಾವಕಾಶ ದೊರಕಿಸಿಕೊಡಲಾಗಿದೆ (ವಿವರ ನೀಡುವುದು)

(ಇ) ಉದ್ಯೋಗ ಮೇಳದಲ್ಲಿ ಕಂಪನಿಗಳು ನೀಡಿರುವ ಉದ್ಯೋಗಾವಕಾಶಗಳೆಷ್ಟು ? ಉದ್ಯೋಗ ಮೇಳದಲ್ಲಿ ಭಾಗವಹಿಸಿರುವ ಕಂಪನಿಗಳಿಗೆ ಸರ್ಕಾರದಿಂದ ಷರತ್ತುಗಳನ್ನು ವಿಧಿಸಲಾಗಿತ್ತೇ ;

(ಈ) ರಾಜ್ಯದ ಕೈಗಾರಿಕಾ ಕೇಂದ್ರಗಳಲ್ಲಿ ಸೌರಶಕ್ತಿ ಮೇಲ್ಛಾವಣೆಯನ್ನು ಕಡ್ಡಾಯವಾಗಿ ಅಳವಡಿಸಲು ಸೂಚನೆ ನೀಡಿದಲ್ಲಿ ರಾಜ್ಯದಲ್ಲಿ ವಿದ್ಯುತ್ ಕೊರತೆ ನಿವಾರಿಸಲು ಸಾಧ್ಯವಾಗುತ್ತದೆ ಎಂಬುದನ್ನು ಇಲಾಖೆ ಗಮನಿಸಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ?

## ಬಿಜಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೭೯ (೩೬೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಜಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡಲಾಗಿದೆ ; ಅವುಗಳಲ್ಲಿ ಎಷ್ಟು ಘಟಕಗಳು ಯಾವ ಯಾವ ಪಂಚಾಯಿತಿಗಳಲ್ಲಿ ನೀರು ಒದಗಿಸುತ್ತಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳ ಎಷ್ಟು ಪಂಚಾಯಿತಿಗಳು ತಮ್ಮ ಸ್ವಂತ ಅನುದಾನದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಿಕೊಂಡಿವೆ ; ಎಷ್ಟು ಪಂಚಾಯಿತಿಗಳಿಗೆ ಸ್ಥಳೀಯ ಶಾಸಕರ ಅನುದಾನದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ? ಕ್ಷೇತ್ರವಾರು, ಪಂಚಾಯತಿವಾರು ವಿವರ ನೀಡುವುದು)

## ಬಿಜಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೮೦ (೩೬೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಜಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಮಂಜೂರಾದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಎಷ್ಟು ; (ಪ್ರತಿ ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಮಂಜೂರಾದ ಬಹುಗ್ರಾಮ ಕುಡಿಯುವ ನೀರಿನ ಎಷ್ಟು ಯೋಜನೆಗಳು ಪೂರ್ಣಗೊಂಡು ಜನರಿಗೆ ನೀರು ಪೂರೈಸುತ್ತಿವೆ ; (ಪ್ರತಿ ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಅಪೂರ್ಣವಾದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳೆಷ್ಟು ; ಅವುಗಳ ಅಂದಾಜು ವೆಚ್ಚ ಎಷ್ಟು ; ಅವುಗಳ ಕೆಲಸವನ್ನು ಯಾವ ಗುತ್ತಿಗೆದಾರರಿಗೆ ಒದಗಿಸಲಾಗಿದೆ ; ಅವರಿಗೆ ನೀಡಿದ ಕಾಲಾವಕಾಶ ಎಷ್ಟು ; ವಿಳಂಬವಾಗಲು ಕಾರಣ ಏನು ; (ತಾಲ್ಲೂಕುವಾರು ವಿವರ ನೀಡುವುದು)

## ಬಸವನಬಾಗೇವಾಡಿ ತಾಲ್ಲೂಕಿನ ಕಣಕಾಲ ಗ್ರಾಮ ಪಂಚಾಯತಿಯ ವಸತಿ ಯೋಜನೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೮೧ (೩೬೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೪ ರಿಂದ ೨೦೧೫ ರವರೆಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಕಣಕಾಲ ಗ್ರಾಮ ಪಂಚಾಯಿತಿಯ ಕೊಡಗಾನೂರು ವಾರ್ಡ್ ನಂ ೫ ಮತ್ತು ೬ ರಲ್ಲಿ ವಸತಿ ಯೋಜನೆಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಪೂರ್ಣಗೊಂಡ ಫಲಾನುಭವಿಗಳ ಹೆಸರು, ಬಿಡುಗಡೆಯಾದ ಹಣದ ಮೊತ್ತವೆಷ್ಟು ವಿವರ ನೀಡುವುದು)

(ಆ) ೨೦೦೪ ರಿಂದ ೨೦೧೫ರವರೆಗೆ ಮನೆಗಳು ಮಂಜೂರಾದ ಫಲಾನುಭವಿಗಳ ಸಂಪೂರ್ಣ ಹೆಸರುಗಳು ಹಾಗೂ ಬಿಡುಗಡೆಯಾದ ಹಣದ ಮೊತ್ತದ ವಿವರ ಮತ್ತು ಇಂದಿರಾ ಆವಾಸ್, ಅಂಬೇಡ್ಕರ್ ಮನೆಗಳ ಫಲಾನುಭವಿಗಳ ಸಂಪೂರ್ಣ ವಿವರ ಹಾಗೂ ಬಿಡುಗಡೆಯಾದ ಹಣದ ಮೊತ್ತ ಒದಗಿಸಲಾಗುತ್ತದೆಯೇ ?

## ಪದವಿ ಪೂರ್ವ ದೈಹಿಕ ಶಿಕ್ಷಣ ಉಪನ್ಯಾಸಕರ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೩೦೮೨ (೩೬೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ದೈಹಿಕ ಶಿಕ್ಷಣ ಉಪನ್ಯಾಸಕರ ಈಗಿನ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಎಷ್ಟು ವಿದ್ಯಾರ್ಥಿಗಳು (ಕನಿಷ್ಠ) ಇದ್ದರೆ, ಒಬ್ಬ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗೆ ಅವಕಾಶವಿದೆ ; ಈ ನಿಯಮವನ್ನು ಯಾವಾಗ ಅಳವಡಿಸಿಕೊಳ್ಳಲಾಯಿತು ;

(ಆ) ಇದಕ್ಕೆ ಮುಂಚಿನ ನಿಯಮಾವಳಿಯ ವಿವರಗಳೇನು ; ೨೦೧೪ರ ವೃಂದ ಮತ್ತು ನೇಮಕಾತಿಯ ನಿಯಮವು ದೈಹಿಕ ಶಿಕ್ಷಣ ಉಪನ್ಯಾಸಕರಿಗೆ ಅನ್ವಯವಾಗುವಂತೆ ಜಾರಿಯಾಗಿದೆಯೇ ; ಜಾರಿಯಾಗಿದ್ದಲ್ಲಿ ಎಷ್ಟು ಕಾಲೇಜುಗಳಿಗೆ ಅನ್ವಯವಾಗಿದೆ ?

## ರಾಜ್ಯದಲ್ಲಿನ ಶಾಲಾ ಕಾಲೇಜುಗಳ ಕಟ್ಟಡ ಹಾಗೂ ಬೋಧಕ / ಬೋಧಕೇತರ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೩೦೮೩ (೩೬೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳು ಸೂಕ್ತ ಕಟ್ಟಡ, ಮೂಲಭೂತ ಸೌಕರ್ಯ, ಬೋಧಕರ ಕೊರತೆ, ಬೋಧಕೇತರರ ಶೂನ್ಯಾವಸ್ಥೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) RMSA ಯೋಜನೆಯಡಿ ಹಾಗೂ ವಿವಿಧ ಯೋಜನೆಗಳ ಅಡಿ ಪ್ರೌಢ ಶಾಲಾ ಕಟ್ಟಡಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಕಟ್ಟಡಗಳು ನಿರ್ಮಾಣವಾಗಿದೆಯೇ ಕಾಮಗಾರಿ ವೆಚ್ಚ

ಹೆಚ್ಚಳವಾಗಿರುವ ಕಾರಣಕ್ಕಾಗಿ ಬಿಕ್ಕಟ್ಟು ನಿರ್ಮಾಣವಾಗಿರುವುದು ನಿಜವೇ ; ಈ ಬಿಕ್ಕಟ್ಟು ಪರಿಹರಿಸಿ ಹಣ ಒದಗಿಸಲು ಸರ್ಕಾರದ ಪರಿಹಾರ ಉಪಾಯಗಳೇನು ;

(ಇ) ಈ ಯೋಜನೆಗಳ ಅಡಿ ಕಳಪೆ ಕಾಮಗಾರಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ೨೦೧೨–೧೩, ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನ ಹಣಕಾಸು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ವಿವಿಧ ಯೋಜನೆಗಳಡಿ ಬಂದಿರುವ ಹಣದ ಮೊತ್ತ ಎಷ್ಟು; (ಪ್ರತಿ ಯೋಜನವಾರು ಹಾಗೂ ಒಟ್ಟು ವಿವರಗಳನ್ನು ಒದಗಿಸುವುದು)

## ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಪದೋನ್ನತಿ ಹೊಂದಿದ ಶಿಕ್ಷಕರ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೩೦೮೪ (೩೬೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ಕಳೆದ ೦೨ ವರ್ಷಗಳಲ್ಲಿ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಪದೋನ್ನತಿ ನೀಡಲಾದ ಶಿಕ್ಷಕರ ಸಂಖ್ಯೆ ಎಷ್ಟು ; (ಪ್ರತಿಯೊಬ್ಬರ ವಿವರ ನೀಡುವುದು)

(ಆ) ಪ್ರೌಢಶಾಲೆಯಿಂದ ಪದವಿ ಪೂರ್ವ ಉಪನ್ಯಾಸಕರಾಗಿ ಪದೋನ್ನತಿ ನೀಡಲಾದ ಶಿಕ್ಷಕರ ಸಂಖ್ಯೆ ಎಷ್ಟು; (ಶಿಕ್ಷಕವಾರು ವಿವರ ನೀಡುವುದು)

(ಇ) ಪ್ರೌಢಶಾಲಾ ಸಹ ಶಿಕ್ಷಕರಿಗೆ ಪ್ರೌಢಶಾಲಾ ಮುಖ್ಯ ಗುರುಗಳಾಗಿ ಪದೋನ್ನತಿ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ಈ ಎಲ್ಲಾ ಪದೋನ್ನತಿಗೆ ಇರುವ ನಿಯಮಾವಳಿಗಳು ಯಾವುವು ; (ವಿವರ ನೀಡುವುದು) ಪದೋನ್ನತಿ ಪಡೆದಿರುವ ಶಿಕ್ಷಕರಿಗೆ ೧೦.೧೫.೨೦ ವೇತನ ಬಡ್ತಿಗಳು ಸಿಗದೇ ಆರ್ಥಿಕವಾಗಿ ಸೌಲಭ್ಯಗಳು ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹೆಚ್ಚಿನ ಅರ್ಹತೆ ಹೊಂದಿ ಪದೋನ್ನತಿ ತೆಗೆದುಕೊಂಡ ನಂತರವೂ ಮೂಲ ಹುದ್ದೆಯಲ್ಲೇ ಮುಂದುವರಿದರೆ ಪಡೆಯಬಹುದಾದ ಆರ್ಥಿಕ ಸೌಲಭ್ಯಕ್ಕಿಂತ ಕಡಿಮೆ ಆರ್ಥಿಕ ಸೌಲಭ್ಯ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಊ) ಪದವಿ ಪೂರ್ವ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ಹೊಂದಲು ಇರುವ ವೃಂದ ಮತ್ತು ನೇಮಕಾತಿ ನಿಯಮಗಳು ಯಾವುವು ; ಅದರಲ್ಲಿರುವ ಅಂಶಗಳ ತಿದ್ದುಪಡಿಗೆ ಸರ್ಕಾರದ ಚಿಂತನೆ ಹಾಗೂ ಕ್ರಮಗಳೇನು ;

## ಪ್ರಾಥಮಿಕ ಮತ್ತು ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳ ಬೋಧಕರಿಗೆ (Ex-Gratia) ನೀಡುವ ಬಗ್ಗೆ.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೩೦೮೫ (೩೬೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮ರ ನಂತರ ನೇಮಕವಾಗಿರುವ ಸರ್ಕಾರಿ ಹಾಗೂ ಅನುದಾನಿತ, ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನ ಬೋಧಕರಿಗೆ ವಿಶೇಷ ಬೋಧನಾ ಭತ್ಯೆ (Ex-Gratia) ನೀಡುವ ಕುರಿತು ಇರುವ ನಿಯಮಾವಳಿಗಳು ಯಾವುವು ;

(ಆ) ಇವರುಗಳಿಗೆ ವಿಶೇಷ ಬೋಧನಾ ಭತ್ಯೆ ಕೊಡದೇ ಇರುವುದಕ್ಕೆ ಕಾರಣ ಏನು ;

(ಇ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನ ಹೆಚ್ಚುವರಿ ಬೋಧನಾ ಭತ್ಯೆ (Ex-Gratia) ಪಡೆಯದೇ ಇರುವ ಬೋಧಕರ ಸಂಖ್ಯೆ ಎಷ್ಟು ; (ಪ್ರತಿಯೊಬ್ಬರ ವಿವರ ನೀಡುವುದು)

(ಈ) ಪ್ರೌಢಶಾಲಾ ಮುಖ್ಯ ಗುರುಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರು ಇವರೂ ಕೂಡ ಬೋಧನಾ ಕಾರ್ಯದಲ್ಲಿ ನಿರತರಾಗಿದ್ದು, ಇವರಿಗೆ ವಿಶೇಷ ಬೋಧನಾ ಭತ್ಯೆ ನೀಡದಿರುವುದಕ್ಕೆ ಕಾರಣವೇನು ;

(ಉ) ಇದರಿಂದ ಈ ಸಿಬ್ಬಂದಿಗಳಿಗೆ ಅನ್ಯಾಯವಾಗುತ್ತಿದ್ದು, ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸರ್ಕಾರಿ ಹಾಗೂ ಅನುದಾನಿತ ಶಾಲಾ ಶಿಕ್ಷಕರ ಪಿಂಚಣಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೩೦೮೬ (೩೬೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರ ಪಿಂಚಣಿಯ ಕುರಿತು ಇರುವ ಯೋಜನೆಗಳು ಯಾವುವು ; (ಯೋಜನಾವಾರು ವಿವರ ನೀಡುವುದು)

(ಆ) ಆ ಯೋಜನೆಗಳ ಸಾಮ್ಯತೆ ಹಾಗೂ ವ್ಯತ್ಯಾಸಗಳೇನು ; (ತುಲನಾತ್ಮಕ ವಿವರ ನೀಡುವುದು) ಈ ಯೋಜನೆಗಳಲ್ಲಿ ಸರ್ಕಾರದ ಹೊಣೆಗಾರಿಕೆ ಏನು ;

(ಇ) ಅನುದಾನಿತ ಸಿಬ್ಬಂದಿಗೆ ನಿವೃತ್ತಿಯ ನಂತರ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಈ) ಸರ್ಕಾರಿ ಶಿಕ್ಷಕರು /ಅನುದಾನಿತ ಶಿಕ್ಷಕರ ಮಧ್ಯದಲ್ಲಿ ಇರುವ ಸಾಮ್ಯತೆ, ವ್ಯತ್ಯಾಸಗಳೇನು ; (ತುಲನಾತ್ಮಕ ವಿವರ ನೀಡುವುದು) ಈ ಶಿಕ್ಷಕರ ಮಧ್ಯೆ ಭೇದ–ಭಾವ, ತಾರತಮ್ಯ ಮಾಡುತ್ತಿರುವುದು ಸರಿಯೇ ;

(ಉ) ಈಗಿರುವ ಸರ್ಕಾರಿ ಸಿಬ್ಬಂದಿಗೆ ಹೊಸ ಪಿಂಚಣಿ ಯೋಜನೆಯನ್ನು ಹಿಂತೆಗೆದುಕೊಂಡು ಹಳೆ ಪಿಂಚಣಿ ಯೋಜನೆಯನ್ನು ಮುಂದುವರಿಸುವ ಕುರಿತು ಸರ್ಕಾರದ ನಿಲುವೇನು ?

## ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೮೭ (೩೭೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡುವ ಬಗ್ಗೆ ಸರ್ಕಾರ ದಿ: ೧೮.೦೬.೨೦೧೪ ರಂದು ಹೊರಡಿಸಿದ ಆದೇಶ ಸಂವಿಧಾನದ ಪರಿಚ್ಛೇದ ೨೯(೧) ಹಾಗೂ ೩೦(೧) ರನ್ವಯ ಹಾಗೂ ರಾಷ್ಟ್ರೀಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಆಯೋಗದ ಮಾರ್ಗಸೂಚಿಗಳನ್ವಯ ಇದೆಯೇ ;

(ಆ) ರಾಷ್ಟ್ರೀಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಆಯೋಗದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಶೇಕಡವಾರು ಮಾನದಂಡವಲ್ಲವೆಂಬುದು ನಿಜವೇ ;

(ಇ) ಹಾಗಿದ್ದಲ್ಲಿ, ಸದರಿ ಆದೇಶದಲ್ಲಿ ವಿದ್ಯಾರ್ಥಿಗಳ ಶೇಕಡವಾರನ್ನು ಮಾನದಂಡವಾಗಿ ನಿಗದಿಪಡಿಸಲು ಕಾರಣಗಳೇನು ;

(ಈ) ರಾಜ್ಯದಲ್ಲಿ ಧಾರ್ಮಿಕ ಅಲ್ಪಸಂಖ್ಯಾತ ಹಾಗೂ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂಬ ವರ್ಗೀಕರಣವನ್ನು ಆಯಾ ಧರ್ಮ ಹಾಗೂ ಭಾಷೆ ಎಂದು ವರ್ಗೀಕರಿಸಲು ಇರುವ ಕಾರಣಗಳೇನು ;

(ಉ) ಸಂವಿಧಾನವು ಅಲ್ಪಸಂಖ್ಯಾತರಿಗೆ ನೀಡಿರುವ ಹಕ್ಕನ್ನು ದಮನಗೊಳಿಸುವ ಈ ಆದೇಶವನ್ನು ರದ್ದುಪಡಿಸಿ ಹೊಸದಾಗಿ ಸಂವಿಧಾನ ಬದ್ಧವಾದ ಸರ್ಕಾರಿ ಆದೇಶ ಹೊರಡಿಸಲು ಉದ್ದೇಶಿಸಲಾಗಿದೆಯೇ ; ಹಾಗಿದ್ದಲ್ಲಿ, ಹೊಸ ಸರ್ಕಾರಿ ಆದೇಶವನ್ನು ಯಾವ ದಿನಾಂಕದೊಳಗೆ ಹೊರಡಿಸಲಾಗುವುದು ?

## ವೇತನ ತಡೆಹಿಡಿದಿರುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೮೮ (೩೭೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಹೊಂದಿರದ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಬಳ ತಡೆಹಿಡಿದಿರುವುದು ನಿಜವೆ;

(ಇ) ಸಿಬ್ಬಂದಿಯ ಸಂಬಳವನ್ನು ತಡೆಹಿಡಿದು ಸರಕಾರಿ ಆದೇಶ ಹೊರಡಿಸಲಾಗಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಜವಾಬ್ದಾರಿ ಆಡಳಿತ ಮಂಡಳಿಗಳಿಗೆ ಸಂಬಂಧಿಸಿದ್ದು ಸಿಬ್ಬಂದಿಯ ಸಂಬಳ ತಡೆಹಿಡಿದಿರುವುದು ನ್ಯಾಯ ಸಮ್ಮತವೇ;

(ಉ) ಈ ತೊಂದರೆಯನ್ನು ಪರಿಹರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ವೈದ್ಯಕೀಯ ವೆಚ್ಚ ಮರುಪಾವತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೮೯ (೩೭೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಸಿಬ್ಬಂದಿಗೆ ಪಾವತಿಸಬೇಕಾದ ವೈದ್ಯಕೀಯ ವೆಚ್ಚ ಮರುಪಾವತಿಗೆ ಅನುದಾನದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವೈದ್ಯಕೀಯ ವೆಚ್ಚದ ಮರುಪಾವತಿಗೆ ಬೇಕಾಗಬಹುದಾದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವೈದ್ಯಕೀಯ ವೆಚ್ಚ ಮರುಪಾವತಿಗೆ ಜಿಲ್ಲಾ ಪಂಚಾಯತ್‌ಗಳಿಗೆ ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು?

## ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ ಸಮಸ್ಯೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೯೯೦ (೩೭೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿನ ಸಿಬ್ಬಂದಿಗೆ ಸೇವಾಭದ್ರತೆ, ರಜೆ, ಕನಿಷ್ಠ ವೇತನ ಹಾಗೂ ಇತರೆ ಸೌಲಭ್ಯಗಳನ್ನು ಆಡಳಿತ ಮಂಡಳಿಗಳು ಕಡ್ಡಾಯವಾಗಿ ಒದಗಿಸಲು ಸರ್ಕಾರಿ ಆದೇಶವನ್ನು ಯಾವಾಗ ಹೊರಡಿಸಲಾಯಿತು ;

(ಆ) ಈ ಆದೇಶವನ್ನು ಖಾಸಗಿ ಆಡಳಿತ ಮಂಡಳಿಗಳು ಕಡ್ಡಾಯವಾಗಿ ಪರಿಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಈ ಆದೇಶವನ್ನು ಪರಿಪಾಲಿಸಿದ ಹಾಗೂ ಪರಿಪಾಲಿಸದೇ ಇರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಆದೇಶವನ್ನು ಜಾರಿಗೊಳಿಸದೇ ಇರುವ ಆಡಳಿತ ಮಂಡಳಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

## ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಚಿತ್ರಕಲಾ ಶಿಕ್ಷಕರ ವಿದ್ಯಾರ್ಹತೆ ಹಾಗೂ ನೇಮಕಾತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ್ (ಪದವೀಧರರ ಕ್ಷೇತ್ರ) :–**

೩೦೯೧ (೩೭೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಾಲೆಗಳಲ್ಲಿ ಇರುವ ಚಿತ್ರಕಲಾ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಏನು ;

(ಆ) ರಾಜ್ಯದಲ್ಲಿ ಚಿತ್ರಕಲಾ ಶಿಕ್ಷಣಕ್ಕೆ ಸಂಬಂಧಿಸಿದಂತೆ ಸರ್ಕಾರ ಈ ಹಿಂದೆ ನಡೆಸುತ್ತಿದ್ದ ಡಿಎಂಸಿ ಹಾಗೂ ಎ.ಎಂ.ಜಿ.ಡಿ. ಕೋರ್ಸ್‌ಗಳನ್ನು ರದ್ದು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ರದ್ದುಪಡಿಸಲಾಗಿದ್ದು ಯಾವಾಗ ;

(ಇ) ರಾಜ್ಯದಲ್ಲಿ ಚಿತ್ರಕಲಾ ಶಿಕ್ಷಣಕ್ಕೆ ಸಂಬಂಧಿಸಿದಂತೆ ಎ.ಟಿ.ಸಿ., ಬಿ.ವಿ.ಇ.ಡಿ. ಬಿ.ವಿ.ಎ ಬಿ.ಎಫ್.ಎ ಎಂ.ಎಫ್.ಎ ಎಂ.ವಿ.ಎ ಈ ಹೊಸ ಕೋರ್ಸ್‌ಗಳು ಪ್ರಾರಂಭವಾಗಿದ್ದು ನಿಜವೇ ;

(ಈ) ಚಿತ್ರಕಲೆಗೆ ಸಂಬಂಧಿಸಿದಂತೆ ಹೊಸ ಕೋರ್ಸ್‌ಗಳು ಪ್ರಾರಂಭವಾದ ಹಿನ್ನಲೆಯಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ ತಿದ್ದುಪಡಿ ತರಲಾಗುವುದು ಯಾವಾಗ ;

(ಉ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ಆಡಳಿತ ಮಂಡಳಿ ತುಂಬಿಕೊಳ್ಳಲು ಅನುಮತಿ ನೀಡಲು ಇರುವ ತೊಂದರೆಗಳು ಯಾವುವು ?

## ಗ್ರಾಮ ವಿಕಾಸ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೯೨ (೩೭೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ವಿಕಾಸ ಯೋಜನೆ ಪ್ರಾರಂಭವಾದ ಸಮಯ ಮತ್ತು ಮೀಸಲಿಟ್ಟಿರುವ ಹಣ ಎಷ್ಟು; (ವಿವರ ನೀಡುವುದು)

(ಆ) ಗ್ರಾಮ ವಿಕಾಸ ಯೋಜನೆಯ ವ್ಯಾಪ್ತಿ ಏನು ; (ಯೋಜನೆಯ ಕುರಿತು ಸಂಕ್ಷಿಪ್ತ ವಿವರ ನೀಡುವುದು)

(ಇ) ಅಕ್ಟೋಬರ್ ೨೦೧೫ ರೊಳಗೆ ಮತ್ತು ಮುಂದಿನ ದಿನಗಳಲ್ಲಿ ಈ ಯೋಜನೆಯ ಅನುಷ್ಠಾನದ ಗುರಿ ಏನು ? (ವಿವರ ನೀಡುವುದು)

## ಗ್ರಾಮೀಣ ವಿದ್ಯಾರ್ಥಿಗಳಿಗೆ ಸಿ.ಇ.ಟಿ ತರಬೇತಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೯೩ (೩೭೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಕಾಲೇಜುಗಳ ಪಿಯುಸಿ ವಿದ್ಯಾರ್ಥಿಗಳಿಗೆ, ಇಂಜಿನಿಯರಿಂಗ್ ಮತ್ತು ಮೆಡಿಕಲ್‌ನ ಪ್ರವೇಶ ಪರೀಕ್ಷೆಗಳನ್ನು

(ಸಿ.ಇ.ಟಿ) ಸಮರ್ಥವಾಗಿ ಎದುರಿಸಲು ಯಾವ ರೀತಿಯ ತರಬೇತಿ ನೀಡಲಾಗುತ್ತಿದೆ ;

(ಆ) ಇಲ್ಲವಾದಲ್ಲಿ, ಈ ಸಂಬಂಧ ಗ್ರಾಮೀಣ ವಿದ್ಯಾರ್ಥಿಗಳಿಗೆ ಇನ್ನಷ್ಟು ಹೆಚ್ಚು ತರಬೇತಿ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಿಂದ ಗ್ರಾಮೀಣ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಗ್ರಂಥಾಲಯಗಳಿಗೆ ಸಿ.ಇ.ಟಿ. ಗೆ ಸಂಬಂಧಿಸಿದ ಯಾವ ಯಾವ ಪುಸ್ತಕಗಳನ್ನು ನೀಡಲಾಗಿದೆ ;

(ಈ) ನೀಡಿಲ್ಲವಾದಲ್ಲಿ, ಇದರಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದಿಲ್ಲವೆ;

(ಉ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಅಕ್ರಮ ಠೇವಣಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೯೪೪ (೩೭೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹಣವು ಅಕ್ರಮ ಬ್ಯಾಂಕ್ ಖಾತೆಗಳ ಮೂಲಕ ಅಕ್ರಮ ಠೇವಣಿಯಾಗಿರುವುದು ನಿಜವೇ; ಈ ಪ್ರಕರಣದ ಪೂರ್ಣ ವಿವರ ನೀಡುವುದು;

(ಆ) ಸದರಿ ಅಕ್ರಮ ಬ್ಯಾಂಕ್ ಖಾತೆಗಳನ್ನು ಯಾವ ಯಾವ ಹೆಸರಿನಲ್ಲಿ ತೆರೆಯಲಾಗಿದೆ;

(ಇ) ಸದರಿ ಅಕ್ರಮ ಬ್ಯಾಂಕ್ ಖಾತೆಗಳಲ್ಲಿ ಇಟ್ಟಿರುವ ಸರ್ಕಾರಿ ಠೇವಣಿ ಹಣದಿಂದ ಬಂದಿರುವ ಒಟ್ಟಾರೆ ಬಡ್ಡಿಯ ಮೊತ್ತವೆಷ್ಟು?

## ವಿದೇಶಿ ಬಂಡವಾಳ ಹೂಡಿಕೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೯೫೫ (೩೭೧೪) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಿಂದ ರಾಜ್ಯದಲ್ಲಿನ ಕೈಗಾರಿಕಾ ಕ್ಷೇತ್ರದಲ್ಲಿ ಆಗಿರುವ ವಿದೇಶಿ ಬಂಡವಾಳ ಹೂಡಿಕೆಯ ಪ್ರಮಾಣವೇನು; (ವಾರ್ಷಿಕವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ವಿದೇಶಿ ಬಂಡವಾಳ ಹೂಡಿಕೆಯ ಪ್ರಮಾಣದಲ್ಲಿ ಇಳಿಕೆಯಾಗಿರುವುದು ನಿಜವೇ; ನಿಜವಾಗಿದ್ದಲ್ಲಿ ಕಾರಣಗಳೇನು;

(ಇ) ಕೈಗಾರಿಕಾ ಕ್ಷೇತ್ರವನ್ನು ಇನ್ನಷ್ಟು ಹೆಚ್ಚು ಅಭಿವೃದ್ಧಿಪಡಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ?

## ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದಿರುವುದರ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೫೬ (೩೭೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ಸರ್ಕಾರಿ ಪದವಿಪೂರ್ವ ಕಾಲೇಜು ಸ್ವಂತ ಕಟ್ಟಡದಲ್ಲಿರುವುದು ನಿಜವೇ ಇದ್ದಲ್ಲಿ, ಇದು ನಿರ್ಮಾಣವಾಗಿದ್ದು ಯಾವಾಗ;

(ಆ) ಕಟ್ಟಡ ನಿರ್ಮಾಣದ ಸಂದರ್ಭದಲ್ಲಿ ಶೌಚಾಲಯ ನಿರ್ಮಾಣವನ್ನು ನಿರ್ಮಾಣದ ನಕಾಶೆಯಲ್ಲಿ ನಮೂದಿಸಿರುವುದಿಲ್ಲವೇ;

(ಇ) ಸದರಿ ಕಟ್ಟಡದಲ್ಲಿ ಶೌಚಾಲಯ ಹಾಗೂ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಪರಿಹರಿಸಲು ಬೇಕಾಗುವ ಕಾಲಾವಧಿ ಎಷ್ಟು;

(ಈ) ಮೂಲಭೂತ ಸೌಕರ್ಯಗಳ ಕೊರತೆ ಇರುವುದು ನಿಜವೇ; ಹಾಗಿದ್ದಲ್ಲಿ ಕೂಡಲೇ ಕ್ರಮ ಕೈಗೊಳ್ಳಲಾಗುವುದೆ?

## ಗಣಕ ಯಂತ್ರದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೮೯೭ (೩೭೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಗಣಕಯಂತ್ರ ಇಲ್ಲದಿರುವ ಶಾಲೆಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಗಣಕಯಂತ್ರ ಕಲಿತ ಶಿಕ್ಷಕರನ್ನು ಖಾಯಂ ಆಗಿ ನೇಮಿಸುವ ಪದ್ಧತಿ ಇದೆಯೇ; (ವಿವರ ನೀಡುವುದು)

(ಇ) ಖಾಯಂ ಆಗಿ ಕೆಲಸ ನಿರ್ವಹಿಸುತ್ತಿರುವ ಗಣಕಯಂತ್ರ ಶಿಕ್ಷಕರೆಷ್ಟು; (ವಿವರ ನೀಡುವುದು)

(ಈ) ಶಾಲೆಗೊಬ್ಬ ಗಣಕಯಂತ್ರ ಶಿಕ್ಷಕರನ್ನು ಖಾಯಂ ಆಗಿ ನೇಮಿಸುವ ಕುರಿತು ಸರ್ಕಾರಕ್ಕೆ ಇರುವ ತೊಂದರೆಗಳೇನು?

## ಗ್ರಾಮೀಣ ಶೌಚಾಲಯಗಳ ನಿರ್ಮಾಣ ಮತ್ತು ಉಪಯೋಗದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೮ (೩೭೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳ ತುಮಕೂರು ಜಿಲ್ಲೆಯಲ್ಲಿ ನಿರ್ಮಿಸಲಾದ ಗ್ರಾಮೀಣಾ ಶೌಚಾಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಗ್ರಾಮೀಣಾ ಮನೆಗಳಲ್ಲಿ ಸ್ನಾನಗೃಹ ಸಮೇತ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ;

(ಇ) ಶೌಚಾಲಯದ ಉಪಯೋಗ ಮತ್ತು ಸ್ವಚ್ಚತಾ ನಿರ್ವಹಣೆ ಕುರಿತು ಗ್ರಾಮಸ್ಥರಲ್ಲಿ ಅರಿವು ಮೂಡಿಸಲು ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಈ) ನೀರಿನ ಸಮರ್ಪಕ ಸೌಲಭ್ಯಗಳಿಲ್ಲದ ಕಾರಣ ಅನಾರೋಗ್ಯ ಸ್ಥಿತಿ ಉದ್ಭವಿಸಿ ಶೌಚಾಲಯವನ್ನು ಉಪಯೋಗಿಸದೇ ಅವುಗಳನ್ನು ಗೋದಾಮುಗಳನ್ನಾಗಿ ಉಪಯೋಗಿಸಲಾಗುತ್ತಿದೆಯೇ?

## ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೯ (೩೭೧೫) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; ಸದರಿ ಅನುದಾನದಲ್ಲಿ ವೆಚ್ಚ ಮಾಡಿರುವ ಹಣವೆಷ್ಟು; ಅಭಿವೃದ್ಧಿ ಪಡಿಸಿರುವ ಕಾಮಗಾರಿಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರವಾಸಿಗರನ್ನು ಆಕರ್ಷಿಸಲು ಹಾಗೂ ಪ್ರವಾಸೋದ್ಯಮ ಇಲಾಖೆಗೆ ಹೆಚ್ಚಿನ ಆದಾಯ ತರುವಂತಹ ಯಾವುದಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ;

(ಇ) ಹಾಗಿದ್ದರೆ, ಅವು ಯಾವುವು? (ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಸೌಕರ್ಯಕ್ಕಾಗಿ ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೧೦೦ (೩೭೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕುಡಿಯಲು ಯೋಗ್ಯವಿಲ್ಲದ ನೀರಿರುವ ಗ್ರಾಮಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಅಂತಹ ಗ್ರಾಮಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕುಡಿಯಲು ಯೋಗ್ಯವಲ್ಲದ ನೀರಿರುವ ಗ್ರಾಮಗಳಲ್ಲಿ ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶುದ್ಧೀಕರಣ ಘಟಕಗಳನ್ನು ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು;

(ಈ) ಈಗಾಗಲೇ ಸ್ಥಾಪಿಸಿರುವ ಘಟಕಗಳ ಸಂಖ್ಯೆ ಎಷ್ಟು? (ತುಮಕೂರು ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

## ರಾಯಚೂರು ನಗರದಲ್ಲಿ ಲ್ಯಾಂಡ್‌ಬ್ಯಾಂಕ್ ಮಾಡುವ ಪ್ರಸ್ತಾವನೆ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೦೧ (೩೭೨೯) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ಕೈಗಾರಿಕಾ ಲ್ಯಾಂಡ್‌ಬ್ಯಾಂಕ್‌ನ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) KIDB ರೈತರುಗಳಿಂದ ಒಪ್ಪಂದದ ಆಧಾರದ ಮೇಲೆ ತೆಗೆದುಕೊಂಡ ಭೂಮಿಯನ್ನು ಧಾರವಾಡ ಜಿಲ್ಲಾಧಿಕಾರಿಗಳು ಸರ್ಕಾರದ ಅನುಮತಿ ಇಲ್ಲದೆ I.I.T. ನಿರ್ಮಾಣ ಮಾಡಲು ಪ್ರಸ್ತಾವನೆ ಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ಪಟ್ಟಣದಲ್ಲಿ .KIDB ವತಿಯಿಂದ ನಿರ್ಮಿಸಿರುವ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಬಂದಿರುವ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರಿನಲ್ಲಿ ನೂತನವಾಗಿ ಕೈಗಾರಿಕಾ ಉದ್ದಿಮೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿ ಪ್ರೌಢಶಾಲೆಗಳ ಬೇಡಿಕೆ ಇರುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೦೨ (೩೭೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಪ್ರೌಢ ಶಾಲೆಗಳ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ೩೭೧ (J) ಕಲಂ ಪ್ರಕಾರ ವಿಶೇಷ ಸ್ಥಾನಮಾನ ಅಡಿಯಲ್ಲಿ ಈ ಭಾಗಕ್ಕೆ ಶಿಕ್ಷಣ ಇಲಾಖೆಯಿಂದ ೨೦೧೫–೧೬ರಲ್ಲಿ ಮಂಜೂರಾತಿ ಮಾಡಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳೆಷ್ಟು;

(ಇ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು;

(ಈ) ೨೦೧೫–೧೬ ರಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಭರ್ತಿ ಮಾಡಿರುವ ಶಿಕ್ಷಕರ ಹುದ್ದೆಗಳೆಷ್ಟು?

## ರಾಯಚೂರು ನಗರದಲ್ಲಿ ವಾರ್ತಾ ಭವನ ನಿರ್ಮಾಣ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೦೩ (೩೭೨೮) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ವಾರ್ತಾ ಇಲಾಖಾ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ವಾರ್ತಾ ಇಲಾಖೆಗೆ ಬೇಡಿಕೆ ಇರುವ ನೂತನ ವಾಹನ (AC) ಒದಗಿಸುವ ಸಲುವಾಗಿ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಜಿಲ್ಲಾ ಮಟ್ಟದ ಪತ್ರಿಕೆಗಳಿಗೆ ಜಾಹೀರಾತು ನೀತಿ ಕಾರ್ಯ ರೂಪಕ್ಕೆ ಬರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಜಿಲ್ಲಾ ಮಟ್ಟದಲ್ಲಿ ಇರುವ ಪತ್ರಿಕೆಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಹಾಗೂ ಮಾನ್ವಿ ನಗರಗಳಲ್ಲಿ ಬಡವರಿಗೆ ಇರುವ ಮನೆಗಳ ಕೊರತೆ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೦೪ (೩೭೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣಗಳಲ್ಲಿ ಬಡವರಿಗೆ ಮನೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ೨೦೧೫–೧೬ರಲ್ಲಿ ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣಗಳಿಗೆ ಮಂಜೂರಾಗಿರುವ ಮನೆಗಳೆಷ್ಟು;

(ಇ) ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಠ ಪಂಗಡ ಸಮುದಾಯಕ್ಕೆ ಸೇರಿರುವ ಜನಾಂಗಕ್ಕೆ ನಿವೇಶನಗಳನ್ನು/ಮನೆಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ತುಂಗಭದ್ರಾ ಹಾಗೂ ಕೃಷ್ಣ ನದಿಗಳ ಮುಖಾಂತರ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೦೫ (೩೭೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಗೆ ಹೊಂದಿಕೊಂಡಿರುವ ತುಂಗಭದ್ರಾ ಹಾಗೂ ಕೃಷ್ಣ ನದಿಗಳ ಮುಖಾಂತರ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಯೋಜನೆಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಅನೇಕ ಕಡೆ OHT (Over Head Tank) ನೀರು ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ತಾಲ್ಲೂಕಿನಲ್ಲಿ ರಾಜೀವ ಗಾಂಧಿ ಟೆಕ್ನಾಲಜಿ ಮಿಷನ್ ಯೋಜನೆಯಲ್ಲಿ ೨೦೦೫-೨೦೦೬ ರಲ್ಲಿ ಮಂಜೂರಾಗಿರುವ ತಲ್ಲೂರ ಹಾಗೂ ಕುರ್ಜಿ ಯೋಜನೆಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಹಜ್ ಯಾತ್ರಿಕರ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು):-**

೩೧೦೬ (೩೬೭೬) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫, ೨೦೧೫-೧೬ರ ಸಾಲಿನಲ್ಲಿ ರಾಜ್ಯದಿಂದ ಹಜ್ ಯಾತ್ರೆ ಕೈಗೊಂಡ ಯಾತ್ರಿಕರ ಸಂಖ್ಯೆ ಎಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಇವರುಗಳಿಗೆ ಮಂಜೂರಾದ ಹಜ್ ಯಾತ್ರಾ ಸಹಾಯಧನದ ಮೊತ್ತವೆಷ್ಟು? (ವರ್ಷಾವಾರು ಹೆಸರುಗಳೊಂದಿಗೆ ವಿವರ ನೀಡುವುದು)

## ಸಿನಿಮಾ ಕಾರ್ಮಿಕರಿಗೆ ವಸತಿ ನೀಡುವ ಬಗ್ಗೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು):-**

೩೧೦೭ (೩೬೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಿನಿಮಾ ಕಾರ್ಮಿಕರಿಗೆ ಬಡಾವಣೆ ನಿರ್ಮಿಸಿ ವಸತಿ ನೀಡುವ ಸರ್ಕಾರದ ಘೋಷಣೆ ಯಾವ ಹಂತದಲ್ಲಿದೆ; ಇದು ಯಾವಾಗ ಪೂರ್ಣಗೊಳ್ಳುವುದು;

(ಆ) ಈವರೆಗೆ ಎಷ್ಟು ಮಂದಿ ಸಿನಿಮಾ ಕಾರ್ಮಿಕರಿಗೆ ವಸತಿ ನೀಡಲಾಗಿದೆ? (ವಿವರ ನೀಡುವುದು)

## ಕನ್ನಡ ಚಲನಚಿತ್ರಗಳಿಗೆ ನೀಡುವ ಸಹಾಯಧನದ ವಿಳಂಬ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೦೮ (೩೬೭೭) ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಚಲನಚಿತ್ರಗಳಿಗೆ ನೀಡುವ ಸಹಾಯಧನದ ಪಾವತಿಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಇರುವ ತಾಂತ್ರಿಕ ಕಾರಣಗಳೇನು;

(ಆ) ಈವರೆಗೆ ಯಾವ ಆರ್ಥಿಕ ವರ್ಷದವರೆಗೆ/ಯಾವ್ಯಾವ ಚಿತ್ರಗಳಿಗೆ ಸಹಾಯಧನ ಪಾವತಿಸಲಾಗಿದೆ ಬಾಕಿ ಇರುವ ಚಿತ್ರಗಳೆಷ್ಟು; (ವರ್ಷಾವಾರು ವಿವರ ನೀಡುವುದು)

## ಮಾಲ್‌ಗಳಲ್ಲಿ ಕನ್ನಡ ಚಿತ್ರ ಪ್ರದರ್ಶನದಲ್ಲಿ ತಾರತಮ್ಯ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೦೯ (೩೬೭೯) ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಮಾಲ್‌ಗಳು ಕನ್ನಡ ಚಲನಚಿತ್ರ ಪ್ರದರ್ಶನದಲ್ಲಿ ತಾರತಮ್ಯ ತೋರುತ್ತಿರುವುದನ್ನು ಸರಿಪಡಿಸಲು ಮಾಲ್ ಮಾಲೀಕರ ಜೊತೆ ಸರ್ಕಾರ ನಡೆಸಿದ ಮಾತುಕತೆ ಯಾವ ಹಂತದಲ್ಲಿದೆ;

(ಆ) ಕನ್ನಡ ಚಿತ್ರಗಳಿಗೆ ನ್ಯಾಯ ಒದಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಮಂಡ್ಯ ಜಿಲ್ಲೆಗೆ ಸಬ್‌ಮಿಷನ್ ಯೋಜನೆಗಳ ಕಾಮಗಾರಿಗಳ ಅನುಷ್ಠಾನದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೧೦ (೩೩೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಸಬ್‌ಮಿಷನ್ ಯೋಜನೆಯಡಿಯಲ್ಲಿ ಅನುಮೋದನೆಗೊಂಡು ಅನುಷ್ಠಾನ–ಗೊಳಿಸುತ್ತಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ತಾಲ್ಲೂಕುವಾರು ಕಾಮಗಾರಿವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ಕಾಮಗಾರಿವಾರು ದಿನಾಂಕ ಸಹಿತ ಮಾಹಿತಿ ನೀಡುವುದು)

(ಇ) ನಿಗಧಿಪಡಿಸಿದ ದಿನಾಂಕದೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಗುತ್ತಿಗೆದಾರರ ಹೆಸರು ವಿಳಾಸ ಸಹಿತ ಕಾಮಗಾರಿಗಳನ್ನೊಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು?

## ವಿಶೇಷ ಘಟಕ ವಸತಿ ಯೋಜನೆ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೧ (೩೩೪೩) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯ ಕೈಗಾರಿಕೆ ಇಲಾಖೆಗೆ ಪ್ರಸಕ್ತ ಸಾಲಿನಲ್ಲಿ ವಿಶೇಷ ಘಟಕ ವಸತಿ ಯೋಜನೆಯಡಿ ನಿಗಧಿಪಡಿಸಿರುವ ಗುರಿ ಎಷ್ಟು;

(ಆ) ಪ್ರಸಕ್ತ ಸಾಲಿನಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಅರ್ಜಿಗಳಲ್ಲಿ ಮಂಜೂರಾತಿಯನ್ನು ಪಡೆದ ಅರ್ಜಿಗಳ ಸಂಖ್ಯೆ ಎಷ್ಟು;

(ಈ) ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಉಳಿಯಲು ಕಾರಣವೇನು;

(ಉ) ಹೆಚ್ಚುವರಿ ಗುರಿಯನ್ನು ನೀಡಲು ಇಲಾಖೆಯವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುವರೇ;

(ಊ) ಸಲ್ಲಿಸಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು?

## ಕೊಪ್ಪಳ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಕಟ್ಟಡಗಳಿಗೆ ನೀಡಲಾದ ಅನುದಾನದ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೨ (೩೩೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕಟ್ಟಡಗಳ ನಿರ್ಮಾಣಕ್ಕೆಂದು ನೀಡಲಾದ ಅನುದಾನವೆಷ್ಟು;

(ಆ) ಸದರಿ ಅನುದಾನದಲ್ಲಿ ನಿರ್ಮಿಸಿದ ಕಟ್ಟಡಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಕಟ್ಟಡಗಳ ಗುಣಮಟ್ಟವನ್ನು ವೀಕ್ಷಿಸಲು ಯಾವ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ;

(ಈ) ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿರುವ ಬ್ಲಾಕ್ ಅಭಿಯಂತರರು ಹಾಗೂ ಜಿಲ್ಲಾ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ;

(ಉ) ಇಲ್ಲವಾದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಖಾಲಿಯಿರುವ ಶಾಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೩ (೩೩೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಹುದ್ದೆಗಳು, ಭರ್ತಿ ಮಾಡಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಎಲ್ಲಾ ಶಾಲೆಗಳಲ್ಲಿ ಆಂಗ್ಲ ಭಾಷೆ ಶಿಕ್ಷಕರ ಕೊರತೆಯೇನಾದರೂ ಇದೆಯೇ; ಇದ್ದಲ್ಲಿ, ಇದಕ್ಕಾಗಿ ಇಲಾಖೆಯವರು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದಾರೆಯೇ;

(ಈ) ಇಲಾಖೆಯಿಂದ ಸರ್ಕಾರಕ್ಕೆ ವರದಿ ಸ್ವೀಕೃತವಾಗಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು;

(ಉ) ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

**ಪಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0 216/800 ಪ್ರತಿಗಳು/24–11–2015